ಸಂಪುಟ : 10 ಸಂಚಿಕೆ: 265 ಪುಟ : 4+2 ಬೆಲೆ: 3.00 ಗುರುವಾರ ಡಿಸೆಂಬರ್ 04 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 265 Pages : 4+2 Price : 3.00 Thursday December 04 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### 'ವಿಶ್ವ ವಿಕಲಚೇತನರ ದಿನಾಚರಣೆ' ಕಾರ್ಯಕ್ರಮ ಉದ್ಘಾಟಿಸಿದ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್

# ವಿಕಲಚೇತನರಲ್ಲಿನ ಪ್ರತಿಭೆಯನ್ನು ಗುರುತಿಸಿ ಮುನ್ನಡೆಸಿ



ವಿಕಲಚೇತನರು ಸ್ವಾವಲಂಬಿಯಾಗಿ ಬದುಕು ಸಾಗಿಸಲು ಹಾಗೂ ಅವರಲ್ಲಿ ಅಡಗಿರುವ ಪ್ರತಿಭೆಯನ್ನು ಗುರುತಿಸಿ ಪ್ರೋತ್ಸಾಹಿಸುವ ಕೆಲಸವಾಗಬೇಕು. ಜಿಲ್ಲೆಯಲ್ಲಿನ ವಿಕಲಚೇತನರು ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿ ಅಂತಾರಾಷ್ಟ್ರೀಯ ಮಟ್ಟದಲ್ಲಿಯೂ ಗದಗ ಜಿಲ್ಲೆಗೆ ಕೀರ್ತಿ ತಂದಿದ್ದಾರೆ. ವಿಕಲಚೇತನರನ್ನು ಗೌರವದಿಂದ ಕಾಣುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ. ಭಾರತ ದೇಶದಲ್ಲಿನ ಕ್ರಿಡಾಪಟುಗಳಲ್ಲಿ ವಿಕಲಚೇತನ ಕ್ರೀಡಾಪಟುಗಳು ವಿಶ್ವಮಟ್ಟದಲ್ಲಿ ಗುರುತಿಸಿಕೊಂಡು ಯಾವುದರಲ್ಲೂ ತಾವು ಕಡಿಮೆ ಇಲ್ಲ ಎಂದು ಸಾಬೀತುಪಡಿಸಿದ್ದಾರೆ.

– ಸಿ.ಎನ್. ಶ್ರೀಧರ್.
ಜಿಲ್ಲಾಧಿಕಾರಿಗಳು, ಗದಗ.



■ವಿಜಯಸಾಕ್ಷಿ ಸುದ್ದಿ, ಗದಗ

ವಿಕಲಚೇತನರಲ್ಲಿ ಇರುವ ಪ್ರತಿಭೆಯನ್ನು ಗುರುತಿಸಿ ಪ್ರೋತ್ಸಾಹಿಸಬೇಕು. ವಿಕಲಚೇತನರಿಗೆ ಅನುಕಂಪ ಬೇಕಾಗಿಲ್ಲ. ಅವರಲ್ಲಿ ಮನೋಸ್ಥೈರ್ಯ ತುಂಬಿ ಮುನ್ನಡೆಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಬುಧವಾರ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ವಿಕಲಚೇತನರ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸ್ವಯಂ ಸೇವಾ ಸಂಘ-ಸಂಸ್ಥೆಗಳ ಸಹಯೋಗದಲ್ಲಿ ಹಮ್ಮಿಕೊಳ್ಳಲಾದ ವಿಶ್ವ ವಿಕಲಚೇತನರ ದಿನಾಚರಣೆ-2025 ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡ್ರ ಮಾತನಾಡಿ, ವಿಕಲಚೇತನರಿಗೆ ಇರುವ ಹಕ್ಕುಗಳ ಕುರಿತು ಜಾಗೃತಿ ಮೂಡಿಸುವುದು ಹಾಗೂ ಸಮಾಜದಲ್ಲಿ ಅವರನ್ನು ಗೌರವದಿಂದ ಕಾಣಬೇಕು ಎನ್ನುವ ಉದ್ದೇಶದಿಂದ ಈ ದಿನಾಚರಣೆಯನ್ನು ಆಚರಿಸಲಾಗುತ್ತದೆ. ವಿಕಲಚೇತನರಿಗಿರುವ ಹಕ್ಕುಗಳ ರಕ್ಷಣೆಯಾಗಬೇಕು. ವಿಕಲಚೇತನರ ಹಕ್ಕುಗಳ ಉಲ್ಲಂಘನೆಯಾಗದಂತೆ ನೋಡಿಕೊಳ್ಳಬೇಕು. ಈ ಕುರಿತು ಕಾನೂನು ಸೇವಾ ಪ್ರಾಧಿಕಾರದ ವಿಕಲಚೇತನರ ಸಹಾಯವಾಣಿ ಸಂಖ್ಯೆ 15100 ಸಂಪರ್ಕಿಸಿ ಪರಿಹಾರ ಕಂಡಕೊಳ್ಳಬಹುದಾಗಿದೆ. ಸಮಾಜದಲ್ಲಿ ಇತರರ ಜೊತೆಗೆ ಅವರು ಸಮಾನವಾಗಿ ಬದುಕುವಂತೆ ನೋಡಿಕೊಳ್ಳಬೇಕು. ವಿಶೇಷ ಚೇತನರಿಗೆ ಸರ್ಕಾರದಿಂದ ಜಾರಿಯಾಗಿರುವ ಸೌಲಭ್ಯಗಳು ದೊರಕಬೇಕು ಎಂದು ತಿಳಿಸಿದರು.

ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಕಲ್ಯಾಣಾಧಿಕಾರಿ ಕೆ. ಮಹಾಂತೇಶ ಪ್ರಾಸ್ತಾವಿಕವಾಗಿ ಮಾತನಾಡಿ, ಜಿಲ್ಲೆಯಲ್ಲಿ ವಿಕಲಚೇತನರಿಗಾಗಿ 21,414 ಯುಡಿಐಡಿ ಕಾರ್ಡ್ ವಿತರಿಸುವ ಕಾರ್ಯ ಕೈಗೊಳ್ಳಲಾಗುತ್ತಿದೆ. ವಿಕಲಚೇತನರು ಸ್ವಾವಲಂಬಿಯಾಗಿ ಬದುಕಲು ಸರ್ಕಾರದಿಂದ ಯಂತ್ರ ಚಾಲಿತ ವಾಹನವನ್ನು ನೀಡಲಾಗುತ್ತಿದೆ. ಸಂಗೀತ ಕ್ಷೇತ್ರದಲ್ಲಿ ಅಂಧರ ಬದುಕಿಗೆ ಪಂಡಿತ ಪುಟ್ಟರಾಜ ಗವಾಯಿಗಳು ದಾರಿದೀಪವಾಗಿದ್ದಾರೆ. ಸರ್ಕಾರದಿಂದ ವಿಕಲಚೇತನರಿಗಾಗಿ ಇರುವ ವಿವಿಧ ಯೋಜನೆಗಳ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದರು.

ಇದೇ ಸಂದರ್ಭದಲ್ಲಿ ವಿಶೇಷ ಸಾಧನೆಗೈದ ವಿಕಲಚೇತನರನ್ನು ಸನ್ಮಾನಿಸಲಾಯಿತು. ವಿಶ್ವ ವಿಕಲಚೇತನರ ದಿನಾಚರಣೆಯ ಪ್ರಯುಕ್ತ ಹಮ್ಮಿಕೊಳ್ಳಲಾಗಿದ್ದ ಕ್ರೀಡೆ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಬಹುಮಾನ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಗದಗ ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಡಿವೈಎಸ್‌ಪಿ ಮಹಾಂತೇಶ ಸಜ್ಜನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ಪದ್ಮಾವತಿ ಜಿ, ಸಮಾಜ ಕಲ್ಯಾಣ ಉಪನಿರ್ದೇಶಕಿ ನಂದಾ ಹಣಬರಟ್ಟಿ, ಎಂ.ಆರ್.ಡಬ್ಲ್ಯು, ವಿ.ಆರ್.ಡಬ್ಲ್ಯು, ವಿಕಲಚೇತನರ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸ್ವಯಂ ಸೇವಾ ಸಂಸ್ಥೆ ಮತ್ತು ಸಂಘಗಳು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಸಿಬ್ಬಂದಿಗಳು ಉಪಸ್ಥಿತರಿದ್ದರು.

ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್ ಸ್ವಾಗತಿಸಿದರು. ಬಾಹುಬಲಿ ಜೈನರ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

## ಪಶ್ಚಿಮ ಬಂಗಾಳದಲ್ಲಿ ನಾವು ಬಂಧನ ಕೇಂದ್ರಗಳನ್ನು ಸ್ಥಾಪಿಸುವುದಿಲ್ಲ : ಮಮತಾ ಬ್ಯಾನರ್ಜಿ



■ವಿಜಯಸಾಕ್ಷಿ ಸುದ್ದಿ, ಕೋಲ್ಕತ್ತಾ

"ನಾನು ಸಂವಿಧಾನವನ್ನು ಅನುಸರಿಸುತ್ತೇನೆ, ಜಾತ್ಯತೀತ ರಾಜಕೀಯ ಮಾಡುತ್ತೇನೆ. ನಮ್ಮ ಸರ್ಕಾರ ರಾಜ್ಯದಲ್ಲಿ ಬಂಧನ ಕೇಂದ್ರಗಳನ್ನು ಸ್ಥಾಪಿಸುವುದಿಲ್ಲ" ಎಂದು ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಮಂಗಳವಾರ (ಡಿ.2) ಹೇಳಿದ್ದಾರೆ.

ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆಯಿಂದ (ಎಸ್‌ಐಆರ್) ಸಾರ್ವಜನಿಕರು ತೊಂದರೆ ಅನುಭವಿಸುವುದು ನಮಗೆ ಇಷ್ಟವಿಲ್ಲ. ಹಾಗಾಗಿ, 'ಬ್ರಿಟಿಷರಂತೆ' ರಾಜ್ಯ ಸರ್ಕಾರಿ ಅಧಿಕಾರಿಗಳಿಗೆ ಬಲವಂತದ ಸೂಚನೆಗಳನ್ನು ನೀಡಬೇಡಿ ಎಂದು ಕೇಂದ್ರ ಸರ್ಕಾರವನ್ನು ಮಮತಾ ಬ್ಯಾನರ್ಜಿ ಒತ್ತಾಯಿಸಿದ್ದಾರೆ ಎಂದು ಇಂಡಿಯನ್ ಎಕ್ಸ್‌ಪ್ರೆಸ್ ವರದಿ ಮಾಡಿದೆ.

ನೀವು ಸೂಚನೆಗಳನ್ನು ನೀಡುವುದಾದರೆ ರಾಜ್ಯ ಸರ್ಕಾರಕ್ಕೆ ನೀಡಿ, ಅಧಿಕಾರಿಗಳಿಗೆ ನೀಡಬೇಡಿ. ಇಲ್ಲದಿದ್ದರೆ ನಾವು ನಮ್ಮ ಅಧಿಕಾರಿಗಳನ್ನು ರಕ್ಷಿಸಬೇಕಾಗುತ್ತದೆ ಎಂದು ಮಮತಾ ಬ್ಯಾನರ್ಜಿ ಹೇಳಿರುವುದಾಗಿ ವರದಿ ಉಲ್ಲೇಖಿಸಿದೆ.

ಎರಡನೇ ಹಂತದಲ್ಲಿ ಮೂರು ಕೇಂದ್ರಾಡಳಿತ ಪ್ರದೇಶಗಳು ಮತ್ತು ಒಂಭತ್ತು ರಾಜ್ಯಗಳಲ್ಲಿ ಭಾರತೀಯ ಚುನಾವಣಾ ಆಯೋಗ ಎಸ್‌ಐಆರ್ ನಡೆಸುತ್ತಿದೆ. 9 ರಾಜ್ಯಗಳಲ್ಲಿ ಪಶ್ಚಿಮ ಬಂಗಾಳ, ತಮಿಳುನಾಡು ಮತ್ತು ಕೇರಳ ಒಳಗೊಂಡಿದೆ. ಈ ರಾಜ್ಯಗಳು ಚುನಾವಣಾ ಆಯೋಗದ ಕ್ರಮವನ್ನು ತೀವ್ರವಾಗಿ ವಿರೋಧಿಸಿವೆ.

### ಶಿಕ್ಷಕರ ಅರ್ಹತಾ ಪರೀಕ್ಷೆ ಕುರಿತು ಜರುಗಿದ ಪೂರ್ವಸಿದ್ಧತಾ ಸಭೆಯಲ್ಲಿ ಡಿಸಿ ಸಿ.ಎನ್. ಶ್ರೀಧರ್ ಕರೆ

# ಪರೀಕ್ಷೆಯನ್ನು ಪಾರದರ್ಶಕವಾಗಿ ನಡೆಸಿ



ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್ ಮಾತನಾಡಿ, ಪರೀಕ್ಷೆಯಲ್ಲಿ ಸಮಯ ಪರಿಪಾಲನೆ ಅತ್ಯವಶ್ಯಕವಾಗಿದ್ದು, ಪ್ರತಿ ಪರೀಕ್ಷಾ ಕೊಠಡಿಯಲ್ಲಿ ಗೋಡೆ ಗಡಿಯಾರಗಳು ಇರುವಂತೆ ನೋಡಿಕೊಳ್ಳಬೇಕು. ತುರ್ತು ವೈದ್ಯಕೀಯ ಸೇವೆ ಅಗತ್ಯವಿದ್ದಲ್ಲಿ ಆರೋಗ್ಯ ಇಲಾಖೆಯವರು ಈ ಕುರಿತು ಕ್ರಮ ವಹಿಸಬೇಕು. ಮಾರ್ಗಾಧಿಕಾರಿಗಳು, ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರು, ಸ್ಥಾನಿಕ ಜಾಗೃತ ದಳದ ಅಧಿಕಾರಿಗಳು ಸಮರ್ಪಕವಾಗಿ ತಮ್ಮ ಕರ್ತವ್ಯಗಳನ್ನು ನಿರ್ವಹಿಸಬೇಕು ಎಂದರು.

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಶಿಕ್ಷಕರ ಅರ್ಹತಾ ಪರೀಕ್ಷೆಯನ್ನು (ಟಿ.ಇ.ಟಿ) ಡಿಸೆಂಬರ್ 7ರಂದು ಪಾರದರ್ಶಕವಾಗಿ ಹಾಗೂ ಅಚ್ಚುಕಟ್ಟಾಗಿ ನಡೆಸಲು ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ಗದಗ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಟಿ.ಇ.ಟಿ. ಪರೀಕ್ಷೆ ಕುರಿತು ಜರುಗಿದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪರೀಕ್ಷೆಗಳಲ್ಲಿ ಯಾವುದೇ ಅಕ್ರಮ, ಅವ್ಯವಹಾರಗಳು ನಡೆಯದಂತೆ ನೋಡಿಕೊಳ್ಳಬೇಕು. ಜಿಲ್ಲೆಯ ಗದಗ ಶಹರದ 27 ಪರೀಕ್ಷಾ ಕೇಂದ್ರಗಳಲ್ಲಿ ಟಿ.ಇ.ಟಿ ಪರೀಕ್ಷೆಗಳು ನಡೆಯಲಿದ್ದು, ಅಲ್ಲಿ ಕುಡಿಯುವ ನೀರು, ವಿದ್ಯುತ್ ವ್ಯವಸ್ಥೆ ಸೇರಿದಂತೆ ಮೂಲಭೂತ ಸೌಲಭ್ಯಗಳು ಇರುವಂತೆ ನೋಡಿಕೊಳ್ಳಬೇಕು. ಪರೀಕ್ಷಾ ಅವಧಿಯಲ್ಲಿ ಶಾಂತಿ, ಸುವ್ಯವಸ್ಥೆ ಕಾಪಾಡಲು ಹಾಗೂ ಯಾವುದೇ ಅಹಿತಕರ ಘಟನೆಗಳು ಜರುಗದಂತೆ ಪರೀಕ್ಷಾ ಕೇಂದ್ರಗಳ ಸುತ್ತ ನಿಷೇಧಾಜ್ಞೆ ಜಾರಿಗೊಳಿಸಿ, ಪರೀಕ್ಷಾ ಅವಧಿಯಲ್ಲಿ ಯಾವುದೇ ಲೋಪ-ದೋಷಗಳಾಗದಂತೆ ಕ್ರಮ ವಹಿಸಬೇಕು. ಒಟ್ಟಾರೆಯಾಗಿ ಟಿ.ಇ.ಟಿ ಪರೀಕ್ಷೆಗಳನ್ನು ವ್ಯವಸ್ಥಿತವಾಗಿ ನಡೆಸಲು ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರುಡಿ ಮಾತನಾಡಿ, ಪರೀಕ್ಷಾ ಕೇಂದ್ರಗಳಿಗೆ 12 ಮಾರ್ಗಗಳನ್ನು ರಚಿಸಲಾಗಿದೆ. ಪ್ರಥಮ ಅಧಿವೇಶನ ಪರೀಕ್ಷೆ ಬೆಳಿಗ್ಗೆ 9.30 ಗಂಟೆಯಿಂದ ಮಧ್ಯಾಹ್ನ 12 ಗಂಟೆಯವರೆಗೆ, ದ್ವಿತೀಯ ಅಧಿವೇಶನ ಪರೀಕ್ಷೆ ಮಧ್ಯಾಹ್ನ 2 ಗಂಟೆಯಿಂದ ಮ. 4.30 ಗಂಟೆಯವರೆಗೆ ಜರುಗಲಿವೆ. ಪ್ರಥಮ ಅಧಿವೇಶನ ಪರೀಕ್ಷೆಯನ್ನು 2159 ಅಭ್ಯರ್ಥಿಗಳು ಹಾಗೂ ದ್ವಿತೀಯ ಅಧಿವೇಶನ ಪರೀಕ್ಷೆಯನ್ನು 6391 ಅಭ್ಯರ್ಥಿಗಳು ಒಟ್ಟಾರೆ 8550 ಅಭ್ಯರ್ಥಿಗಳು ಟಿ.ಇ.ಟಿ. ಪರೀಕ್ಷೆ ಬರೆಯಲಿದ್ದಾರೆ ಎಂದು ಸಭೆಗೆ ವಿವರಿಸಿದರು.

ಈ ಸಂದರ್ಭದಲ್ಲಿ ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರು, ಪ್ರವಾಸೋದ್ಯಮ, ಖಜಾನೆ ಇಲಾಖೆ ಅಧಿಕಾರಿ/ಸಿಬ್ಬಂದಿಗಳು ಹಾಜರಿದ್ದರು.

ಪರೀಕ್ಷಾ ಕೇಂದ್ರಗಳ ವಿವರ: ಗದಗ ಸರ್ಕಾರಿ ಪ.ಪೂ ಕಾಲೇಜು, ಮಹಾವೀರ ಜೈನ್ ಪ್ರೈಮರಿ/ಹೈಸ್ಕೂಲ್, ಬಸವೇಶ್ವರ ಹೈಸ್ಕೂಲ್, ಸಿಡಿಓ ಜೈನ್ ಇಂಗ್ಲೀಷ್ ಮೀಡಿಯಂ ಹೈಸ್ಕೂಲ್, ಜೆಸಿ ಹೈಸ್ಕೂಲ್, ಜೆಡಿ ಶಹ ಲಾಯನ್ಸ್ ಇಂಗ್ಲೀಷ್ ಮೀಡಿಯಂ ಹೈಸ್ಕೂಲ್, ಸನ್ಮಾರ್ಗ ಪ್ರಿಯುನಿವರ್ಸಿಟಿ ▸▸3ನೇ ಪುಟಕ್ಕೆ

## ಜ. 14ರಿಂದ ಅಂಬಿಗರ ಶರಣ ಸಂಸ್ಕೃತಿ ಉತ್ಸವ



■ವಿಜಯಸಾಕ್ಷಿ ಸುದ್ದಿ, ಗದಗ

ಹಾವೇರಿ ಜಿಲ್ಲೆಯ ನರಸೀಪುರದಲ್ಲಿರುವ ನಿಜಶರಣ ಅಂಬಿಗರ ಚೌಡಯ್ಯನವರ ಗುರುಪೀಠದಲ್ಲಿ 2026ನೇ ಸಾಲಿನ ಜ. 14 ಮತ್ತು 15ರಂದು ಅಂಬಿಗರ 10ನೇ ಶರಣ ಸಂಸ್ಕೃತಿ ಉತ್ಸವ, ವಚನ ಗ್ರಂಥ ರಥೋತ್ಸವ ಆಯೋಜಿಸಲಾಗಿದೆ ಎಂದು ಶಾಂತಭೀಷ್ಮ ಚೌಡಯ್ಯ ಸ್ವಾಮೀಜಿ ಹೇಳಿದರು.

ಬುಧವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಶ್ರೀಗಳು, ರಾಜ್ಯದಲ್ಲಿ 37 ಪದಗಳಿಂದ ಗುರುತಿಸಲ್ಪಡುವ ಅಂಬಿಗರ, 10ನೇ ಶರಣ ಸಂಸ್ಕೃತಿ ಉತ್ಸವದ ಅಂಗವಾಗಿ ಶ್ರೀ ನಿಜಶರಣ ಅಂಬಿಗರ ಚೌಡಯ್ಯನವರ ಶಿಲಾಮಂಟಪ, ಕಂಚಿನ ಪುತ್ಥಳಿ ಲೋಕಾರ್ಪಣೆ ಹಾಗೂ ಶ್ರೀ ಮಹರ್ಷಿ ವೇದವ್ಯಾಸ ಕಲ್ಯಾಣ ಮಂಟಪ ಉದ್ಘಾಟನೆ ನೆರವೇರಲಿದೆ ಎಂದರು. ಜ. 14ರಂದು ಅಂಬಿಗರ ಚೌಡಯ್ಯನವರ ತೊಟ್ಟಿಲೋತ್ಸವ, ಐಕ್ಯಮಂಟಪ ಪೂಜೆ, ರಕ್ತದಾನ ಶಿಬಿರ, ಸಾಮೂಹಿಕ ವಿವಾಹ, ರಾಜ್ಯಮಟ್ಟದ ಪ್ರತಿಭಾಪುರಸ್ಕಾರ, ಶ್ರೀ ಶಾಂತಮುನಿ ಶ್ರೀಗಳ 10ನೇ ಸ್ಮರಣೋತ್ಸವ, ಗಂಗಾರತಿ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ.

ಜ.15ರಂದು ಧರ್ಮ ಧ್ವಜಾರೋಹಣ, ಧರ್ಮಸಭೆ, ಶಿಲಾಮಂಟಪ ಮತ್ತು ಕಂಚಿನ ಪುತ್ಥಳಿ ಲೋಕಾರ್ಪಣೆ, ಅಂಬಿಗರ ಚೌಡಯ್ಯನವರ 906ನೇ ಜಯಂತಿ, ವಚನಗ್ರಂಥ ಮಹಾ ರಥೋತ್ಸವ ಜರುಗಲಿದೆ ಎಂದು ಶ್ರೀಗಳು ತಿಳಿಸಿದರು.

ಸಮಾರಂಭಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸಹಿತ ಸಚಿವರು, ಶಾಸಕರನ್ನು ಆಹ್ವಾನಿಸಲಾಗಿದೆ. ಮುಖ್ಯಮಂತ್ರಿಗಳು ಕಾರ್ಯಕ್ರಮಕ್ಕೆ ಆಗಮಿಸುವ ಭರವಸೆಯಿದೆ. ಆ ಸಂದರ್ಭವನ್ನು ಬಳಸಿಕೊಂಡು ಅಂಬಿಗರ ಸಮಾಜವನ್ನು ಎಸ್‌ಟಿ ಪಟ್ಟಿಗೆ ಸೇರ್ಪಡೆ ಮಾಡುವಂತೆ ಹಕ್ಕೊತ್ತಾಯ ಮಾಡಲಾಗುವುದು ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಂಜುನಾಥ ಪುಟಗನಾಳ, ಬಸವರಾಜ ಸಪ್ಪನಗೋಳ, ಜೆ.ಬಿ. ಗಾರವಾಡ, ಕಾಶಪ್ಪ ಬಳಗಾನೂರ, ಮಾಲತೇಶ ಬಾರಕಿ, ಭೀಮಸಿ ಮೇಗಳಮನಿ, ಬಿ.ಎನ್. ಓಲೇಕಾರ, ಚಂದ್ರಶೇಖರ ಪೂಜಾರ, ಮಂಜುನಾಥ ಸುಣಗಾರ, ಯಲ್ಲಪ್ಪ ಹುನುಗುಂದ ಇತರರು ಉಪಸ್ಥಿತರಿದ್ದರು.

## ಕ್ಷೇತ್ರದ ರಸ್ತೆಗಳ ಅಭಿವೃದ್ಧಿಗೆ ಆದ್ಯತೆ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಗ್ರಾಮೀಣ ಭಾಗದ ರಸ್ತೆಗಳಿಗೆ ಸರಕಾರದಿಂದ ಹೆಚ್ಚಿನ ಅನುದಾನ ತಂದು ಆದ್ಯತೆಯ ಅನುಸಾರ ಕ್ಷೇತ್ರದ ರಸ್ತೆಗಳನ್ನು ಅಭಿವೃದ್ಧಿಪಡಿಸಲು ಪ್ರಾಮಾಣಿಕವಾಗಿ ಪ್ರಯತ್ನಿಸುತ್ತೇನೆ ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಅವರು ತಾಲೂಕಿನ ಗೋವನಾಳ ಗ್ರಾಮದಲ್ಲಿ ಗ್ರಾಮೀಣ ಮತ್ತು ಪಂಚಾಯತ ರಾಜ್ ಇಲಾಖೆಯಡಿ ತಲಾ 50 ಲಕ್ಷ ರೂ ಮತ್ತು ಗುಲಗಂಜಿಕೊಪ್ಪದಲ್ಲಿ 50 ಲಕ್ಷ ರೂ ಅನುದಾನದಲ್ಲಿ ಕಾಂಕ್ರೀಟ್ ರಸ್ತೆ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಮಾತನಾಡಿದರು.

ನಾನು ಚುನಾವಣೆ ಪೂರ್ವದಲ್ಲಿ ಮಾತು ಕೊಟ್ಟಂತೆ ಈ ಭಾಗದ ಜನರ 2 ದಶಕಗಳ ಬೇಡಿಕೆಯನುಸಾರ ರಸ್ತೆಗೆ ಅನುದಾನ ತಂದಿದ್ದೇನೆ. ಮುಂಬರುವ ದಿನಗಳಲ್ಲಿ ಗ್ರಾಮದ ಎಸ್‌ಸಿ-ಎಸ್‌ಟಿ ಕಾಲೋನಿಗೂ ಅನುದಾನ ತಂದು ರಸ್ತೆ ಅಭಿವೃದ್ಧಿಪಡಿಸುತ್ತೇನೆ ಮತ್ತು ಗ್ರಾಮದ ಜನರಿಗೆ ಮೂಲಭೂತ ಸೌಲಭ್ಯ ಕಲ್ಪಿಸುವ ಕಾರ್ಯ ಮಾಡುತ್ತೇನೆ ಎಂದರು.

ಈ ವೇಳೆ ಗ್ರಾ.ಪಂ ಅಧ್ಯಕ್ಷ ಕರಿಯಪ್ಪಗೌಡ ಹೊಸಗೌಡ್ರ, ಉಪಾಧ್ಯಕ್ಷೆ ನಿರ್ಮಲಾ ತಳವಾರ, ಪಿಡಿಓ ಜಗದೀಶ ಕುರುಬರ, ಗ್ರಾ.ಪಂ ಮಾಜಿ ಅಧ್ಯಕ್ಷ ಮಂಜನಗೌಡ ಕೆಂಚನಗೌಡ್ರ, ಅಣ್ಣಪ್ಪ ರಾಮಗೇರಿ, ಸುಶೀಲವ್ವ ಮರಿಲಿಂಗನಗೌಡ್ರ, ಬಸಪ್ಪ ಬಡಿಗೇರ, ಈಶ್ವರಪ್ಪ ಸೊರಟೂರ, ಈರನಗೌಡ ನಾಗನಗೌಡ್ರ, ಅಣ್ಣಯ್ಯ ಗಡ್ಡದೇವರಮಠ, ಚಂದ್ರು ತಳವಾರ, ಚಂದ್ರುಗೌಡ ಕರಿಗೌಡ್ರ, ವಸಂತಗೌಡ್ರ ಕರಿಗೌಡ್ರ, ದುಂಡಪ್ಪ ತೇಲಿ, ಯಲ್ಲಪ್ಪಗೌಡ ಭುವನಗೌಡ್ರ, ಪ್ರಕಾಶ ಅಂಗಡಿ, ಮಲ್ಲಯ್ಯ ಹಿರೇಮಠ, ಸೋಮನ ಗೌಡ ಕೊರಡೂರ, ಬಸವರಾಜ ಮಲ್ಲೂರ, ಗಂಗಾಧರ ಮೆಣಸಿನಕಾಯಿ, ಪರಸಪ್ಪ ಇಮ್ಮಡಿ, ಪ್ರವೀಣ ಬೋಮಲೆ, ವಿಶಾಲ ಬಟಗುರ್ಕಿ, ಗ್ರಾ.ಪಂ ಸದಸ್ಯರು, ಸಿಬ್ಬಂದಿಗಳು ಇದ್ದರು.

## ಕವನ

# ಶ್ರೀ ಕೃಷ್ಣನ ನಾಡಿನಲ್ಲಿ ಗೀತೆಯ ಸುರಿಮಳೆ



ಆನಂದತೀರ್ಥರಿಂದ ಅಷ್ಟಮಠ ಸ್ಥಾಪಿತವಾದ
ಉಡುಪಿ ನಗರಿಯಲ್ಲಿ ಗೀತೆಯ ಸುರಿಮಳೆಯಾಗಿತ್ತು
ಧರ್ಮೋ ರಕ್ಷತಿ ರಕ್ಷಿತ: ಎಂಬ ವಾಣಿಯು ಎಲ್ಲೆಡೆ
ಪ್ರತಿಧ್ವನಿಸಿತ್ತು

ವಿಶೇಷ ಮೆರುಗಿನಿಂದ ಮಿಂಚಿದ ಉಡುಪಿಯ ದೇಗುಲ, ಮಠಗಳು
ಯತಿವರೇಣ್ಯರುಗಳ ಬೀಡಿನಲ್ಲಿ ಮೊಳಗಿದ ವೇದಮಂತ್ರ ಘೋಷಗಳು

ಪುರಾಣ, ಪುಣ್ಯಕಥೆ, ಭಕ್ತಿಗೀತೆ, ಸಾಂಸ್ಕೃತಿಕ ಚಟುವಟಿಕೆಯ ಸಾಗರ ಹರಿದಿತ್ತು
ಸುವಾಸಿನಿ, ವಟು, ಭಕ್ತರುಗಳಿಂದ ಶ್ರೀಮದ್ಭಗವದ್ಗೀತಾ ಪಾರಾಯಣ ನಡೆದಿತ್ತು

ವಿವಿಧ ಪುಷ್ಪ, ತುಳಸಿಗಳಿಂದ ಅಲಂಕೃತಗೊಂಡ ಅನ್ನಬ್ರಹ್ಮ
ದೀಪಾಲಂಕಾರದ ನಡುವೆಯೂ ನಸುನಗೆ ಬೀರಿದ
ಪೂಜೆ, ಪುನಸ್ಕಾರ, ಹೋಮ ಹವನಗಳ ಮಧ್ಯೆ
ಅನ್ನಬ್ರಹ್ಮನ ದರ್ಶನದಿ ಪಾವನರಾದ ಭಕ್ತ ಜನ

ಪ್ರಧಾನಿ ಮೋದಿಯವರಿಗೆ ಸ್ವಾಗತದೊಂದಿಗೆ ಆಶೀರ್ವದಿಸಿದ ಸ್ವಾಮಿಗಳು
ದೇಶದ ಜೊತೆಗೆ ಧರ್ಮ ರಕ್ಷಣೆಯ ವಚನ ಬೋಧಿಸಿದರು

ಧರ್ಮಸ್ಥಾಪನೆಗೆ ಮತ್ತೆ ಅವತರಿಸಿ ಬರುವೆ
ಎಂಬ ಭಗವಂತನ ಸಂದೇಶ ನೆನಪಿಸಿತ್ತು
ದ್ವಾಪರಯುಗದ ವೈಭವ ಮತ್ತೆ ಮರುಕಳಿಸಿತ್ತು
ಶ್ರೀ ಕೃಷ್ಣನ ಪಾಂಚಜನ್ಯ ಅಷ್ಟದಿಕ್ಕುಗಳಲ್ಲಿ ಮೊಳಗಲಿ
ಧರ್ಮರಕ್ಷಣೆಗೆ ದೇಶದ ಜನ ಮುಂದಾಗಲಿ

ಭಯೋತ್ಪಾದನೆಯ ಕಾರ್ಮೋಡ ತೊಲಗಲಿ
ದೇಶಭಕ್ತಿಯಂಕುರವು ಹೆಮ್ಮರವಾಗಿ ಬೆಳೆಯಲಿ

**– ಅಂಜನಾ ರಾಘವೇಂದ್ರ ಕುಬೇರ,** ಗದಗ.

---

**ರಾಷ್ಟ್ರೀಯ ದತ್ತು ಮಾಸಾಚರಣೆ ಅಂಗವಾಗಿ ಅತ್ಯುತ್ತಮವಾಗಿ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡ ಜಿಲ್ಲಾಡಳಿತ**

# ಜಿಲ್ಲಾ ಮಕ್ಕಳ ರಕ್ಷಣಾ ಘಟಕಕ್ಕೆ ಪ್ರಥಮ ಸ್ಥಾನ



ಕಾರ್ಯಕ್ರಮದಲ್ಲಿ ಕೇಂದ್ರ ದತ್ತು ಸಂಪನ್ಮೂಲ ಪ್ರಾಧಿಕಾರ (ಕಾರಾ) ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಮತ್ತು ಸದಸ್ಯ ಕಾರ್ಯದರ್ಶಿ ಭಾವನಾ ಸಕ್ಸೆನಾ, ಬೆಂಗಳೂರಿನ ವಿಕಲ ಚೇತನ ಹಾಗೂ ಹಿರಿಯ ನಾಗರಿಕರ ಸಬಲೀಕರ ಇಲಾಖೆಯ ನಿರ್ದೇಶಕ ಡಾ. ಅಶೋಕ ಡಿ ಹಾಗೂ ಬೆಂಗಳೂರಿನ ಮಕ್ಕಳ ರಕ್ಷಣಾ ನಿರ್ದೇಶನಾಲಯದ ನಿರ್ದೇಶಕ ಹಲೀಮಾ ಕೆ ಅವರು ಪ್ರಶಸ್ತಿಪತ್ರ ಹಾಗೂ ನೆನಪಿನ ಕಾಣಿಕೆ ನೀಡಿ ಗೌರವಿಸಿದರು.

**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ಮಕ್ಕಳ ರಕ್ಷಣಾ ನಿರ್ದೇಶನಾಲಯ ಬೆಂಗಳೂರು ಇವರಿಂದ ರಾಷ್ಟ್ರೀಯ ದತ್ತು ಮಾಸಾಚರಣೆ ಅಂಗವಾಗಿ ಕಾನೂನುಬದ್ಧ ದತ್ತು ಕುರಿತು ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು, ಆರೋಗ್ಯ ಇಲಾಖೆ, ವೈದ್ಯಾಧಿಕಾರಿಗಳು ಮತ್ತು ಸಿಬ್ಬಂದಿಗಳು, ನರ್ಸಿಂಗ್ ಕಾಲೇಜು ವಿದ್ಯಾರ್ಥಿಗಳು, ಸ್ವ-ಸಹಾಯ ಸಂಘಗಳ ಪ್ರತಿನಿಧಿಗಳಿಗೆ ಮತ್ತು ಕಾಲೇಜು ವಿದ್ಯಾರ್ಥಿಗಳಿಗೆ, ಸರ್ಕಾರಿ ಹಾಗೂ ಖಾಸಗಿ ಆಸ್ಪತ್ರೆಯ ಸಿಬ್ಬಂದಿಗಳಿಗೆ ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಕ್ರಿಯಾ ಯೋಜನೆಯನ್ನು ನೀಡಲಾಗಿತ್ತು.

ಧಾರವಾಡ ಜಿಲ್ಲೆಯಾದ್ಯಂತ ಜಿಲ್ಲಾಧಿಕಾರಿಗಳ ಮಾರ್ಗದರ್ಶನದಲ್ಲಿ ವಿಶೇಷವಾಗಿ ಜಿಲ್ಲೆಯ ಜನಪ್ರತಿನಿಧಿಗಳಿಂದ, ಚಿತ್ರನಟರು ಮತ್ತು ಜಾನಪದ ಕಲಾವಿದರಿಂದ, ಗಣ್ಯವ್ಯಕ್ತಿಗಳಿಂದ ಕಾನೂನುಬದ್ಧ ದತ್ತು ಕುರಿತು ಸಂದೇಶವನ್ನು ತಯಾರಿಸಿ ಸಾಮಾಜಿಕ ಜಾಲತಾಣಗಳಲ್ಲಿ ಪ್ರಚಾರ ಮಾಡಲಾಯಿತು. ನವೆಂಬರ್ ಮಾಹೆಯ ಕಾರ್ತಿಕ ಮಾಸದ ನಿಮಿತ್ತ ಜಿಲ್ಲೆಯ ದೇವಸ್ಥಾನಗಳು, ಹುಬ್ಬಳ್ಳಿ ರೇಲ್ವೆ ನಿಲ್ದಾಣ ಹಾಗೂ ಕಛೇರಿಗಳಲ್ಲಿ ದತ್ತು ಕುರಿತ ರಂಗೋಲಿ ಚಿತ್ರಗಳನ್ನು ಬಿಡಿಸಿ ಪ್ರಚಾರ ಮಾಡಲಾಯಿತು. ಧಾರವಾಡ ಜಿಲ್ಲೆಯ ಜಿಲ್ಲಾಧಿಕಾರಿಗಳ ಕಛೇರಿಯಿಂದ ಬೈಕ್‌ರ್‍ಯಾಲಿ, ವಾಕಥಾನ್ ಮೂಲಕ ಕಾನೂನುಬದ್ಧ ದತ್ತು ಕುರಿತು ಹೆಚ್ಚಿನ ಪ್ರಚಾರ ಮಾಡಲಾಯಿತು.

ಗ್ರಾಮ ಪಂಚಾಯತ, ಮಹಾನಗರ ಪಾಲಿಕೆಯ ವ್ಯಾಪ್ತಿಯ ಕಸ ವಿಲೇವಾರಿ ವಾಹನದಲ್ಲಿ ಆಡಿಯೋ ಜಿಂಗಲ್ಸ್ ಮೂಲಕ, ಆಕಾಶವಾಣಿ ಧಾರವಾಡ ಕೇಂದ್ರದಲ್ಲಿ ಕಾನೂನುಬದ್ಧವಾಗಿ ದತ್ತು ಪಡೆಯಲು ಮಾರ್ಗಸೂಚಿಗಳ ಕುರಿತು ಅರಿವು ಮೂಡಿಸಲಾಯಿತು.

ರಾಜ್ಯದಲ್ಲಿಯೇ ಎಲ್ಲ ಜಿಲ್ಲೆಗಳಲ್ಲಿ ರಾಷ್ಟ್ರೀಯ ದತ್ತು ಮಾಸಾಚರಣೆ ಅಂಗವಾಗಿ ಹಮ್ಮಿಕೊಂಡಿರುವ ಅರಿವು ಮತ್ತು ಜಾಗೃತಿ ಕಾರ್ಯಕ್ರಮಗಳನ್ನು ಗಮನಿಸಿದ ಮಕ್ಕಳ ರಕ್ಷಣಾ ನಿರ್ದೇಶನಾಲಯವು ಬೆಂಗಳೂರಿನ ಭಾಲಭವನದಲ್ಲಿ ಹಮ್ಮಿಕೊಂಡಿದ್ದ ದತ್ತು ಪೋಷಕರ ಸಮಾವೇಶ ಕಾರ್ಯಕ್ರಮದಲ್ಲಿ ರಾಷ್ಟ್ರೀಯ ದತ್ತು ಮಾಸಾಚರಣೆ ಅಂಗವಾಗಿ ಧಾರವಾಡ ಜಿಲ್ಲೆಯಲ್ಲಿ ಅತ್ಯುತ್ತಮವಾಗಿ ಅರಿವು ಮತ್ತು ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದಕ್ಕಾಗಿ ಪ್ರಥಮ ಸ್ಥಾನ ನೀಡಿ ಗೌರವಿಸಿತು.

ಇದೇ ಸಂದರ್ಭದಲ್ಲಿ ಅಮೂಲ್ಯ (ಜಿ) ಶಿಶುಗೃಹ ಹುಬ್ಬಳ್ಳಿ ಸಂಸ್ಥೆಯಲ್ಲಿ ಪುಷ್ಪಾ ಉಳ್ಳಿಕಾಶಿ ಆಯಾ ಅವರನ್ನು ಮಕ್ಕಳ ಆರೈಕೆಯಲ್ಲಿ ನೀಡಿದ ಸೇವೆಯನ್ನು ಗುರುತಿಸಿ ಸನ್ಮಾನಿಸಲಾಯಿತು. ದ್ವಿತಿಯ ಪಿ.ಯು.ಸಿ ಪರೀಕ್ಷೆಯಲ್ಲಿ ಶೇ. 75ಕ್ಕಿಂತ ಹೆಚ್ಚು ಅಂಕ ಪಡೆದ ಹುಬ್ಬಳ್ಳಿ ಘಂಟಿಕೇರಿ ಸಂಸ್ಥೆಯ ಬಾಲಕಿಯರ ಸರ್ಕಾರಿ ಬಾಲಮಂದಿರದ ಬಾಲಕಿ ವೀಣಾ ಬಡಿಗೇರಿ ಅವರನ್ನು ಸನ್ಮಾನಿಸಲಾಯಿತು.

ರಾಷ್ಟ್ರೀಯ ದತ್ತು ಮಾಸಾಚರಣೆ ಅಂಗವಾಗಿ ಹಮ್ಮಿಕೊಂಡ ಜಾಗೃತಿ ಮತ್ತು ಅರಿವು ಕಾರ್ಯಕ್ರಮಗಳನ್ನು ಅಚ್ಚುಕಟ್ಟಾಗಿ ಆಯೋಜಿಸಿ ಪ್ರಥಮ ಸ್ಥಾನ ಪಡೆಯುವುದರ ಮೂಲಕ ಧಾರವಾಡ ಜಿಲ್ಲೆಯ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಪ್ರಶಂಸೆಗೆ ಪಾತ್ರವಾಗಿದೆ ಎಂದು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

---

# ಶ್ರೀ ವೀರಭದ್ರೇಶ್ವರ ಜಾತ್ರೆ ಇಂದಿನಿಂದ

**■ವಿಜಯಸಾಕ್ಷಿ ಸುದ್ದಿ, ಗದಗ**



ಬೆಟಗೇರಿಯ ಟೆಂಗಿನಕಾಯಿ ಬಜಾರದ ಶ್ರೀ ವೀರಭದ್ರೇಶ್ವರ ಹಾಗೂ ಶ್ರೀ ಪರ್ವತಮಲ್ಲೇಶ್ವರ ಜಾತ್ರಾ ಮಹೋತ್ಸವದ ಕಾರ್ಯಕ್ರಮಗಳು ಡಿ. 4ರಿಂದ 6ರವರೆಗೆ ಜರುಗಲಿವೆ.

ಡಿ. 4ರಂದು ಸಂಜೆ 5 ಗಂಟೆಗೆ ಮಹಾರಥೋತ್ಸವ, ಡಿ. 5ರಂದು ಮುಂಜಾನೆ 9.30 ಗಂಟೆಗೆ ಅಗ್ನಿ ಹಾಯುವದು, ಡಿ. 6ರಂದು ಮುಂಜಾನೆ 11 ಗಂಟೆಗೆ ಉಚಿತ ಸಾಮೂಹಿಕ ವಿವಾಹ ಹಾಗೂ ಮಹಾ ಅನ್ನಸಂತರ್ಪಣೆ ಜರುಗುವದು. ಸಾನ್ನಿಧ್ಯವನ್ನು ಬೆಟಗೇರಿಯ ಸದ್ಗುರು ಮುಕ್ಕಣ್ಣೇಶ್ವರ ಮಠದ ಪೂಜ್ಯ ಶಂಕರಾನಂದ ಮಹಾಸ್ವಾಮಿಗಳು ವಹಿಸುವರು. ಅಧ್ಯಕ್ಷತೆಯನ್ನು ಕುಮಾರಸ್ವಾಮಿ ರಾಮಯ್ಯಸ್ವಾಮಿ ದೇವಾಂಗಮಠ ವಹಿಸುವರು. ಮುಖ್ಯ ಅತಿಥಿಗಳಾಗಿ ಬಸವರಾಜ ಡಾಕಪ್ಪ ಪುರವಂತರ ದಂಪತಿಗಳು ಹಾಗೂ ಅಣ್ಣಪ್ಪ ಕೊಟ್ರೇಶಪ್ಪ ಕೊಪ್ಪದ ದಂಪತಿಗಳು ಆಗಮಿಸುವರು. ಭಕ್ತಾದಿಗಳು ಈ ಎಲ್ಲ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಬೇಕೆಂದು ದೇವಸ್ಥಾನದ ಕಮಿಟಿಯು ವಿನಂತಿಸಿದೆ.

---




ಮುಳಗುಂದ ಪಟ್ಟಣದ ಸರಕಾರಿ ಮಾದರಿ ಕನ್ನಡ ಗಂಡುಮಕ್ಕಳ ಶಾಲೆ ನಂ. 1ಕ್ಕೆ ಆರಿಫ್ ಮುಲ್ಲಾ ಅವರ ಜನ್ಮದಿನದ ನಿಮಿತ್ತ 25 ಊಟದ ತಟ್ಟೆಯನ್ನು ಕೊಡುಗೆ ನೀಡಲಾಯಿತು. ಶಾಲಾ ಪ್ರಧಾನ ಗುರು ಪಿ.ಬಿ. ಕೆಂಚನಗೌಡರ, ಎಂ.ಎಂ. ಮೇಗಲಮನಿ, ಕೆ.ಎಂ. ಹೆರಕಲ್ಲ, ಎಸ್.ಎಚ್. ಉಪ್ಪಾರ, ಎಚ್.ಆರ್. ಭಜಂತ್ರಿ, ವಿ.ಎಂ. ಕಂಠಿ. ಟಿ.ವೀಣಾ, ಎಸ್.ವಿ. ಹಿರೇಮಠ, ಶೈಲಾ ದೊಡ್ಡಮನಿ. ತ್ರಿವೇಣಿ ಬಡ್ನಿ, ಶಭಾನಾ ಢಾಲಾಯತ, ಕವಿತಾ ಬಿನ್ನಾಳ, ಎಫ್.ಆರ್. ಮುಲ್ಲಾ ಇದ್ದರು.

---

**ಸರ್ಕಾರಿ ನೌಕರರಿಗಾಗಿ ಸೈಬರ್ ಕ್ರೈಮ್ ಜಾಗೃತಿ ಉಪನ್ಯಾಸ**

# ಅಕ್ಷರಸ್ಥರೇ ಹೆಚ್ಚು ಮೋಸ ಹೋಗುತ್ತಿದ್ದಾರೆ



ನಕಲಿ ಕಸ್ಟಮ್ಸ್, ಸಿಬಿಐ, ಸೈಬರ್ ಕ್ರೈಮ್, ಪೊಲೀಸ್ ಅಧಿಕಾರಿ ಎಂದು ಕರೆ ಮಾಡುವ ಮೂಲಕ ನಿಮ್ಮ ಮೇಲೆ ಪ್ರಕರಣವಿದೆ, ಹಣಕಾಸು ಗೊಂದಲವಿದೆ, ವೀಡಿಯೋ ಕಾಲ್ ಮೂಲಕ ವಿಚಾರಣೆ ನಡೆಯುತ್ತದೆ ಎಂದು ಹೇಳಿ ಜನರನ್ನು ಹೆದರಿಸುತ್ತಿದ್ದಾರೆ. ಆ ರೀತಿ ಕಾನೂನಿನಲ್ಲಿ ಇಲ್ಲ. ಪೊಲೀಸರು ದೂರವಾಣಿ ಅಥವಾ ವಿಡಿಯೋ ಕಾಲ್ ಮೂಲಕ ಯಾರನ್ನೂ ಬಂಧಿಸುವುದಿಲ್ಲ. ಯಾವುದೇ ಶಂಕೆ ಬಂದರೆ, ತಕ್ಷಣ 112 ಅಥವಾ ಸೈಬರ್ ಹೆಲ್ಪ್‌ಲೈನ್ 1930ನ್ನು ಸಂಪರ್ಕಿಸಿ ಎಂದು ಡಿವೈಎಸ್ಪಿ ಶಿವಾನಂದ ಕಟಗಿ ನೌಕರರಿಗೆ ಮನವಿ ಮಾಡಿದರು.

**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ಪ್ರಸ್ತುತ ದಿನದಲ್ಲಿ ಬಹುತೇಕ ಸಾರ್ವಜನಿಕರಿಗಾಗಲಿ, ಸರ್ಕಾರಿ ನೌಕರರೇ ಆಗಿರಲಿ, ತಂತ್ರಜ್ಞಾನದ ಬಗ್ಗೆ ಹೆಚ್ಚು ಮಾಹಿತಿ ಇರುವುದಿಲ್ಲ. ಅದಕ್ಕಾಗಿಯೇ ದಿನದಿನಕ್ಕೆ ಸೈಬರ್ ವಂಚನೆಗಳು ಹೆಚ್ಚಾಗಿ ನಡೆಯುತ್ತಿವೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಹೇಳಿದರು.

ಅವರು ಮಂಗಳವಾರ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ವತಿಯಿಂದ ಸರ್ಕಾರಿ ನೌಕರರಿಗೆ ಆಯೋಜಿಸಿದ್ದ ಆರ್ಥಿಕ ವಂಚನೆ, ಸೈಬರ್ ಕ್ರೈಮ್, ಡಿಜಿಟಲ್ ಅರೆಸ್ಟ್ ಮತ್ತು ಕೆಜಿಐಡಿ ಸೌಲಭ್ಯಗಳ ಕುರಿತು ಹಮ್ಮಿಕೊಂಡಿದ್ದ ವಿಶೇಷ ಉಪನ್ಯಾಸ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಹಿರಿಯ ಪೊಲೀಸ್ ಅಧಿಕಾರಿ, ಸೆನ್ ಪೊಲೀಸ್ ಠಾಣೆಯ ಡಿವೈಎಸ್ಪಿ ಶಿವಾನಂದ ಕಟಗಿ ಮಾತನಾಡಿ, ಇಂದಿನ ಕಾಲದಲ್ಲಿ ಸೈಬರ್ ಜಾಗೃತಿ ಅತ್ಯಂತ ಅಗತ್ಯವಾದ ಒಂದು ಕೌಶಲ್ಯವಾಗಿದೆ. ಮಾನವೀಯ ಸಂಬಂಧಗಳು, ಬ್ಯಾಂಕಿಂಗ್ ವ್ಯವಸ್ಥೆಗಳು, ವ್ಯಾಪಾರ-ವ್ಯವಹಾರಗಳು ಎಲ್ಲವೂ ಡಿಜಿಟಲ್ ಆಗುತ್ತಿರುವ ಈ ಯುಗದಲ್ಲಿ ವಂಚನೆಗಳ ರೂಪವೇ ಬದಲಾಗಿದೆ. ನಾವು ಜಾಗೃತರಾಗಿರದಿದ್ದರೆ, ಅಪರಾಧಿಗಳು ಕೆಲವೇ ಕ್ಷಣಗಳಲ್ಲಿ ನಮ್ಮ ಸಂಪೂರ್ಣ ಹಣವನ್ನು ದೋಚಬಹುದು ಎಂದು ಹೇಳಿದರು.

ಸೈಬರ್ ಅಪರಾಧದಿಂದ ವಂಚಿತರಾದವರು ಕೇವಲ ಶೇ. 10ರಷ್ಟು ಜನ ಮಾತ್ರ ದೂರನ್ನು ದಾಖಲಿಸುತ್ತಾರೆ. ಆದರೆ ಸಣ್ಣ ಮೊತ್ತ ಕಳೆದುಕೊಂಡವರು, ಓಟಿಪಿ ವರ್ಗಾಯಿಸಿದವರು, ಅನಾಮಧೇಯ ಕರೆಗಳಿಂದ ಹಣ ಕಳೆದುಕೊಂಡು ವಂಚಿತರಾದವರು ಯಾವುದೇ ದೂರುಗಳನ್ನು ಕೊಡುವುದಿಲ್ಲ ಎಂದು ಅವರು ತಿಳಿಸಿದರು

ಕೆಜಿಐಡಿ ಜಿಲ್ಲಾ ವಿಮಾ ಅಧಿಕಾರಿ ಜೆ.ಸಿ. ಕಠಾರಿ ಅವರು ಕೆಜಿಐಡಿ ವಿಮೆ, ವಂತಿಗೆ, ಬೋನಸ್, ಲಾಭ ಮತ್ತು ಹೂಡಿಕೆ ಕುರಿತು ವಿವರಿಸಿದರು. ಜಿಲ್ಲಾಧಿಕಾರಿಗಳ ಕಚೇರಿ ಶಿರಸ್ತೆದಾರ ಕೆ. ಶ್ರೀಧರ ಸ್ವಾಗತಿಸಿದರು. ಮಲ್ಲಿಕಾರ್ಜುನ ಸೊಲಗಿ ಕಾರ್ಯಕ್ರಮ ನಿರೂಪಿಸಿದರು. ಡಾ. ಸುರೇಶ ಹಿರೇಮಠ ವಂದಿಸಿದರು.

---

# ಆರೋಗ್ಯಕರ ಸಮಾಜದ ಸದುದ್ದೇಶವಿರಲಿ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಬೀದಿ ಬದಿ ವ್ಯಾಪಾರಸ್ಥರು ತಾವು ಮಾರುವ ಆಹಾರ ಪದಾರ್ಥಗಳು ಶುದ್ಧತೆ, ಸ್ವಚ್ಛತೆಯಿಂದ ಕೂಡಿರಬೇಕು ಮತ್ತು ಧೂಳು ಇನ್ನಿತರ ವಸ್ತುಗಳು ಆಹಾರ ಪದಾರ್ಥಗಳ ಮೇಲಿರದಂತೆ ನೋಡಿಕೊಳ್ಳಬೇಕು ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಅವರು ಪಟ್ಟಣದ ಪುರಸಭೆ ಸಭಾಭವನದಲ್ಲಿ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ, ಜೀವನೋಪಾಯ ಇಲಾಖೆ, ಪುರಸಭೆ ಕಾರ್ಯಾಲಯಗಳ ಆಶ್ರಯದಲ್ಲಿ ಪ್ರಧಾನಮಂತ್ರಿ ಬೀದಿ ಬದಿ ವ್ಯಾಪಾರಿಗಳ ಆತ್ಮನಿರ್ಭರ ನಿಧಿ, ಪಿಎಂ ಸ್ವನಿಧಿಯ 'ಸಮೃದ್ಧಿ ಯೋಜನೆ ಉತ್ಸವ' ಕಾರ್ಯಕ್ರಮದಡಿ ಬೀದಿ ಬದಿ ವ್ಯಾಪಾರಸ್ಥರಿಗೆ ಹಮ್ಮಿಕೊಳ್ಳಲಾಗಿದ್ದ ಆಹಾರ ಶುದ್ಧತೆಯ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು.

ಬೀದಿ ಬದಿ ವ್ಯಾಪಾರಸ್ಥರು ತಮ್ಮ ತಮ್ಮ ಜೀವನೋಪಾಯದ ಉದ್ದೇಶದೊಂದಿಗೆ ಜನರ ಆರೋಗ್ಯ, ಆರೋಗ್ಯಕರ ಸಮಾಜ ನಿರ್ಮಾಣದ ಸದುದ್ದೇಶ ಹೊಂದಿರಬೇಕು. ಬೀದಿ ಬದಿ ವ್ಯಾಪಾರಸ್ಥರಿಗೆ ನೆರಳಿನ ಕೊಡೆ, ಐಡಿ ಕಾರ್ಡ್ ಕೊಡುವ ಜತೆಗೆ ವ್ಯಾಪಾರಸ್ಥರ ಸಮಸ್ಯೆ ಪರಿಹರಿಸಲು ಪ್ರಯತ್ನ ಮಾಡುತ್ತೇನೆ. ಬಜಾರ ರಸ್ತೆಯಲ್ಲಿ ತಮಗೆ ನಿಲ್ಲುವ ಸ್ಥಳದಲ್ಲಿ ಮಾರ್ಕಿಂಗ್ ಮಾಡಿಸಲಾಗುವುದು, ಟ್ರಾಫಿಕ್ ಸಮಸ್ಯೆ ಪರಿಹರಿಸಲು ತಾವು ಸಹಕಾರ ನೀಡಬೇಕು. ಸರ್ಕಾರದ ಯೋಜನೆಗಳನ್ನು ಸರಿಯಾಗಿ ತಲುಪಿಸುವ ಕೆಲಸ ಮಾಡುತ್ತೇನೆ ಎಂದರು.

ಈ ವೇಳೆ ಬೀದಿ ಬದಿ ವ್ಯಾಪಾರಸ್ಥರ ಸಂಘದ ಅಧ್ಯಕ್ಷ ಮಂಜುನಾಥ ಹೊಗೆಸೊಪ್ಪಿನ, ಸಮುದಾಯ ಸಂಘಟನಾಧಿಕಾರಿ ಶೋಭಾ ಬೆಳ್ಳಿಕೊಪ್ಪ, ವ್ಯವಸ್ಥಾಪಕಿ ಮಂಜುಳಾ ಹೂಗಾರ, ಕಂದಾಯ ಅಧಿಕಾರಿ ಸುರೇಶ ಪೂಜಾರ, ಹನಮಂತಪ್ಪ ನಂದೆಣ್ಣನವರ, ಸಿಆರ್‌ಪಿ ಲಕ್ಷ್ಮೀ ಓದುನವರ, ಇಂದ್ರಾ ಸವಣೂರ ಸೇರಿದಂತೆ ಬೀದಿ ಬದಿ ವ್ಯಾಪಾರಸ್ಥರು ಇದ್ದರು.

---

# ಸರಕಾರಿ ಸೌಲಭ್ಯ ಬಳಸಿಕೊಂಡು ವಿದ್ಯಾವಂತರಾಗಿ



**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಸರಕಾರ ಶಿಕ್ಷಣಕ್ಕೆಂದು ಬಹಳಷ್ಟು ಧನ ವಿನಿಯೋಗ ಮಾಡುತ್ತಿದೆ. ಅದರೊಂದಿಗೆ ವಿದ್ಯಾರ್ಥಿಗಳು ಚೆನ್ನಾಗಿರಬೇಕೆಂಬ ಆಶಯದೊಂದಿಗೆ ಅನೇಕ ಯೋಜನೆಗಳು, ಸೌಲಭ್ಯಗಳನ್ನು ಜಾರಿಗೊಳಿಸಿದೆ. ಈ ಸೌಲಭ್ಯಗಳನ್ನು ಬಳಸಿಕೊಂಡು ನೀವು ವಿದ್ಯಾವಂತರಾಗಿ ಎಂದು ಜಿ.ಪಂ ಕಾರ್ಯಕ್ರಮ ವ್ಯವಸ್ಥಾಪಕ ಎಂ. ಮರಿಬಸನಗೌಡ ಹೇಳಿದರು.

ಪಟ್ಟಣದ ಪಿಎಸ್‌ಎಸ್ ಡಾ. ಕೆ.ಬಿ. ಧನ್ನೂರ ಆಂಗ್ಲ ಮಾಧ್ಯಮ ಶಾಲೆಯಲ್ಲಿ ನಡೆದ ಸಿಎಂ ಪೋಷಕ ಅಭಿಯಾನದಲ್ಲಿ ಪಾಲಕರ ಸಭೆಯನ್ನುದ್ದೇಶಿಸಿ ಅವರು ಮಾತನಾಡಿದರು.

ಮಕ್ಕಳಿಗಾಗಿ ಸರಕಾರ ಸಮವಸ್ತ್ರ, ಬಿಸಿಯೂಟ, ಮೊಟ್ಟೆ, ಹಾಲು ಇತ್ಯಾದಿಗಳನ್ನು ನೀಡುತ್ತಿದೆ. ನಿಮ್ಮ ಮಕ್ಕಳಾರೂ ಅಪೌಷ್ಟಿಕತೆಯಿಂದ ಬಳಲಬಾರದು ಎಂಬುದು ಸರಕಾರದ ಉದ್ದೇಶ. ಈ ಸೌಲಭ್ಯಗಳೊಂದಿಗೆ ನಿಮ್ಮ ಮಕ್ಕಳ ಲಾಲನೆ-ಪಾಲನೆಯ ಜೊತೆಗೆ ಮಕ್ಕಳ ವಿದ್ಯಾಭ್ಯಾಸ ಮತ್ತು ಅವರ ಸಂಸ್ಕಾರದ ಕಡೆಗೆ ಗಮನ ನೀಡಬೇಕಾದುದು ಅವಶ್ಯಕವಾಗಿದೆ ಎಂದರು.

ತಾಲೂಕಾ ಕಾರ್ಯಕ್ರಮ ವ್ಯವಸ್ಥಾಪಕ ವಿಜಯ ಮಹಾಂತೇಶ ಹಿರೇಮಠ ಮಾತನಾಡಿ, ಬಿಸಿಯೂಟದಿಂದ ಶಾಲೆಗಳಲ್ಲಿ ಮಕ್ಕಳ ಹಾಜರಾತಿ ಹೆಚ್ಚಾಗಿದೆ. ಮಕ್ಕಳಲ್ಲಿನ ಅಪೌಷ್ಟಿಕತೆಯನ್ನು ಕಡಿಮೆ ಮಾಡಲು ಸರಕಾರ ಅನೇಕ ಯೋಜನೆಗಳನ್ನು ಹಮ್ಮಿಕೊಂಡಿದ್ದು, ಇವುಗಳ ಸಮರ್ಪಕ ಬಳಕೆಯಿಂದ ನಿಮ್ಮ ಮಕ್ಕಳು ವಿದ್ಯೆಯೊಂದಿಗೆ ಸದೃಢರಾಗಿ ಬೆಳೆಯಲಿ ಎಂದು ಆಶಿಸಿದರು. ವೇದಿಕೆಯ ಮೇಲೆ ಶ್ರೀಕಾಂತ ರಡ್ಡೇರ, ಬಸವರಾಜ ನಾಲ್ವಾಡದ, ಬಿ.ಜಿ. ಹಳ್ಳೂರ, ಪ್ರಕಾಶ ಪಲ್ಲೇದ ಉಪಸ್ಥಿತರಿದ್ದರು. ಸಾಮಾಜಿಕ ಅರಣ್ಯ ಇಲಾಖೆಯ ಅಧಿಕಾರಿ ಶ್ರೀಶೈಲ ಕಳಸದ ಅಧ್ಯಕ್ಷತೆ ವಹಿಸಿದ್ದರು. ಪ್ರೌಢ ವಿಭಾಗದ ಮುಖ್ಯ ಶಿಕ್ಷಕ ಎಂ.ಡಿ. ಗ್ರಾಮಪುರೋಹಿತ ಸ್ವಾಗತಿಸಿದರು. ಶಿಕ್ಷಕಿ ಆರ್.ಐ. ನಾಗಠಾಣ ನಿರೂಪಿಸಿದರು. ಪ್ರಾಥಮಿಕ ವಿಭಾಗದ ಮುಖ್ಯ ಶಿಕ್ಷಕ ಎಸ್.ಎಚ್. ಮಲ್ಲನಗೌಡರ ವಂದಿಸಿದರು.

---

**ಶಿವಾನುಭವಗೋಷ್ಠಿಯಲ್ಲಿ ಮುಪ್ಪಿನ ಬಸವಲಿಂಗ ಸ್ವಾಮೀಜಿ**

# ಹಣಕ್ಕಿಂತ ಅನ್ನ, ಅಕ್ಷರ ಮುಖ್ಯ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**



ಮನುಷ್ಯನಿಗೆ ಬದುಕಲು ಹಣಕ್ಕಿಂತ ಮುಖ್ಯವಾಗಿರುವುದು ಅನ್ನ, ಅಕ್ಷರ. ಅಕ್ಷರವನ್ನು ಸಂಪಾದಿಸಿದರೆ ಅನ್ನ ತಾನಾಗೇ ಸಿಗುತ್ತದೆ. ಆದ್ದರಿಂದ ವಿದ್ಯಾರ್ಥಿಗಳು ತಮ್ಮ ವಿದ್ಯಾರ್ಥಿ ಜೀವನದಲ್ಲಿ ವಿದ್ಯೆ ಸಂಪಾದನೆಗೆ ಹೆಚ್ಚಿನ ಗಮನ ನೀಡಬೇಕೆಂದು ಹಾಲಕೆರೆ ಸಂಸ್ಥಾನದ ಪೀಠಾಧಿಪತಿ ಶ್ರೀ ಮುಪ್ಪಿನ ಬಸವಲಿಂಗ ಸ್ವಾಮೀಜಿ ಹೇಳಿದರು.

ಪಟ್ಟಣದ ಶ್ರೀ ಅನ್ನದಾನೇಶ್ವರ ಮಂಟಪದಲ್ಲಿ ಜರುಗಿದ 68ನೇ ಶಿವಾನುಭವಗೋಷ್ಠಿಯ ದಿವ್ಯ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.

ಈ ಬದುಕು ಕ್ಷಣಿಕ ಮತ್ತು ನಶ್ವರ ಎಂಬುದು ಎಲ್ಲರಿಗೂ ಗೊತ್ತಿದೆ. ಆದರೂ ನಾವು ಈ ಬದುಕಿನಲ್ಲಿ ಮಾಡಬಾರದ ಅನೇಕ ಕೆಲಸಗಳನ್ನು ಮಾಡಿ ನಮ್ಮನ್ನು ನಾವು ರಕ್ಷಣೆ ಮಾಡಿಕೊಳ್ಳಲು ಮುಂದಾಗುತ್ತೇವೆ. ಇಂತಹ ಗುಣಗಳನ್ನು ನಾವು ಒಮ್ಮೆ ಬೆಳೆಸಿಕೊಂಡರೆ ನಂತರ ಅದರಿಂದ ಹೊರ ಬರುವುದು ತುಂಬಾ ದುಸ್ತರವಾಗುತ್ತದೆ. ಆದ್ದರಿಂದ ನೀವು ಇಂತಹ ಗುಣಗಳಿಂದ, ದುರ್ಜನರಿಂದ, ದುಶ್ಚಟಗಳಿಂದ, ದುಷ್ಟ ವಿಚಾರಗಳಿಂದ ದೂರವಿರಬೇಕು. ಇದೆಲ್ಲವನ್ನೂ ನಿಮಗೆ ತಿಳಿಸುವುದಕ್ಕಾಗಿಯೇ ಈ ಶಿವಾನುಭವಗೋಷ್ಠಿಯನ್ನು ಏರ್ಪಡಿಸಲಾಗುತ್ತಿದೆ ಎಂದರು.

ಪ್ರಾಧ್ಯಾಪಕ ಡಿ.ಎಲ್. ಪವಾರ ಮಾತನಾಡಿ, ಸಂವಿಧಾನ ನಮಗೆ ಹಕ್ಕುಗಳ ಜೊತೆಗೆ ಕರ್ತವ್ಯಗಳನ್ನೂ ನೀಡಿದೆ. ಹಕ್ಕುಗಳಿಗಾಗಿ ಹೋರಾಡುವ ನಾವು ಕರ್ತವ್ಯಗಳನ್ನು ಸಮರ್ಪಕವಾಗಿ ಮಾಡಲು ಮುಂದಾಗಬೇಕು. ಸಂವಿಧಾನ ಶಿಲ್ಪಿ ಡಾ. ಬಾಬಾಸಾಹೇಬ ಅಂಬೇಡ್ಕರ್ ರಚಿಸಿದ ಸಂವಿಧಾನಕ್ಕೆ ಚ್ಯುತಿ ಬಾರದಂತೆ ನಡೆದುಕೊಳ್ಳುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ ಎಂದರು.

ವಿದ್ಯಾರ್ಥಿನಿ ಶಿವಲೀಲಾ ಸೋಮಗೊಂಡ ಕರ್ನಾಟಕದ ಇತಿಹಾಸವನ್ನು ಸ್ಮರಿಸಿಕೊಂಡು ಪಂಪ-ರನ್ನ-ಪೊನ್ನ-ಜನ್ನರಿಂದ ಹಿಡಿದು ಇಂದಿನ ಆಧುನಿಕ ಕವಿಗಳು ಕನ್ನಡವನ್ನು ಹೇಗೆ ಬೆಳೆಸಿದ್ದಾರೆ, ಕನ್ನಡ ನಾಡಿನಲ್ಲಿರುವ ಸೃಷ್ಟಿ ಸೌಂದರ್ಯದ ಬಗ್ಗೆ ಅನೇಕ ಉದಾಹರಣೆಗಳ ಮೂಲಕ ವಿವರಿಸಿದಳು.

ವಿದ್ಯಾರ್ಥಿನಿ ರೇಣುಕಾ ಕುಪನಿ ಸತ್ಯಕ್ಕ, ಲದ್ದೆ ಸೋಮಣ್ಣ ಮತ್ತು ಮೋಳಿಗೆ ಮಾರಯ್ಯನವರ ವಚನಗಳ ವಿಶ್ಲೇಷಣೆ ಮಾಡಿದಳು. ಡಾ. ಕಲ್ಲಯ್ಯ ಹಿರೇಮಠ ಸ್ವಾಗತಿಸಿದರು. ಶಿಕ್ಷಕ ಒಂಟೆಲಿ ನಿರೂಪಿಸಿದರು. ಮುಖ್ಯ ಶಿಕ್ಷಕ ಸಂಗಮೇಶ ಹೂಲಗೇರಿ ವಂದಿಸಿದರು.

# ಪರೀಕ್ಷೆಯನ್ನು ಪಾರದರ್ಶಕವಾಗಿ ನಡೆಸಿ

▶▶ ಮೊದಲನೇ ಪುಟದಿಂದ

ಸೈನ್ಸ್ ಮತ್ತು ಕಾಮರ್ಸ್ ಕಾಲೇಜು, ಗುರುಬಸವ ಸಿಬಿಎಸ್‌ಇ ಇಂಗ್ಲೀಷ್ ಮೀಡಿಯಂ ಹೈಸ್ಕೂಲ್, ತೋಂಟದಾರ್ಯ ಕಾಲೇಜ್ ಆಫ್ ಇಂಜಿನಿಯರಿಂಗ್, ಎಸ್.ಟಿ.ಎಸ್.ಕೆಕೆ ಪಾಲಿಟೆಕ್ನಿಕ್, ಕೆಎಲ್‌ಇ ಸೊಸೈಟಿ ಜೆ.ಟಿ.ಪಿ.ಯು.ಕಾಲೇಜು, ಕೆ.ಎಲ್.ಇ ಆರ್ಟ್ಸ್ ಮತ್ತು ಕಾಮರ್ಸ್ ಪಿಯು ಕಾಲೇಜು, ಕೆಎಲ್‌ಇಸಿ.ಬಿ.ಎಸ್.ಇ ಸೇಂಟ್ ಜಾನ್ ಹೈಸ್ಕೂಲ್ ಬೆಟಗೇರಿ-ಗದಗ, ಲೋಯಲಾ ಹೈಸ್ಕೂಲ್, ಎಎಸ್‌ಎಸ್ ಕಾಮರ್ಸ್ ಕಾಲೇಜು ಬೆಟಗೇರಿ, ಜ. ತೋಂಟದಾರ್ಯ ಇಂಗ್ಲೀಷ್ ಮೀಡಿಯಂ ಹೈಸ್ಕೂಲ್, ಜೆಟಿವಿಪಿಎಸ್ ಬಸವೇಶ್ವರ ಆರ್ಟ್ಸ್ ಕಾಮರ್ಸ್ ಮತ್ತು ಸೈನ್ಸ್ ಕಾಲೇಜು, ಎಚ್.ಸಿ.ಇ.ಎಸ್ ಪಿ.ಯು ಕಾಲೇಜು, ಬಿಪಿನ್ ಚಿಕ್ಕಟ್ಟಿ ಪಿಯು ಸೈನ್ಸ್ ಕಾಲೇಜು ಮೈಲಾರಪ್ಪ ಮೆಣಸಗಿ ಹೈಸ್ಕೂಲ್, ಬ್ರೈಟ್ ಹಾರಿಜಾನ್ ಇಂಗ್ಲೀಷ್ ಮೀಡಿಯಂ ಹೈಸ್ಕೂಲ್, ವಿಡಿಎಸ್‌ಟಿ ಬಾಯ್ಸ್ ಹೈಸ್ಕೂಲ್, ವಿಡಿಎಸ್ ಶ್ರೀಮತಿ ಎಸ್.ಪಿ. ಹುಯಿಲಗೋಳ ಗರ್ಲ್ಸ್ ಹೈಸ್ಕೂಲ್, ಸಿ.ಎಸ್. ಪಾಟೀಲ ಬಾಯ್ಸ್ ಸ್ಕೂಲ್, ಸಿ.ಎಸ್. ಪಾಟೀಲ ಗರ್ಲ್ಸ್ ಸ್ಕೂಲ್, ಗವರ್ನಮೆಂಟ್ ಫಸ್ಟ್ ಗ್ರೇಡ್ ಕಾಲೇಜು.



**ಗದಗ :** ಶ್ರೀಲಂಕಾದ ರತ್ನಾಪುರದಲ್ಲಿ ಡಿ. 6 ಹಾಗೂ 7 ರಂದು ನಡೆಯುವ ಸೌಥ್ ಏಷಿಯನ್ ಪ್ಯಾರಾ ಸಿಟ್ಟಿಂಗ್ ಥ್ರೋ ಬಾಲ್ ಚಾಂಪಿಯನ್ ಶಿಪ್ ಕ್ರೀಡಾಕೂಟಕ್ಕೆ ಗದಗ ಜಿಲ್ಲೆಯಿಂದ ಮಹಾಂತೇಶ ಬೇವೂರ, ಮಾಲತಿ ಇನಾಮತಿ, ಆನಂದ ಬೇಂದ್ರೆ ಆಯ್ಕೆಯಾಗಿದ್ದಾರೆ.

---

**ತೆಗ್ಗಿನಮಠ ಸಂಸ್ಥಾನದ ಲಿಂ.ಶ್ರೀ ಚಂದ್ರಶೇಖರ ಶಿವಾಚಾರ್ಯ ಸ್ವಾಮಿಗಳವರ 11ನೇ ವರ್ಷದ ಪುಣ್ಯ ಸ್ಮರಣೋತ್ಸವ**

# ಮಾಡಿದ ಕಾರ್ಯಗಳು ಎಂದಿಗೂ ಶಾಶ್ವತ

■ **ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ**

ಬಹು ಜನ್ಮಗಳ ಪುಣ್ಯದ ಫಲ ಈ ಮಾನವ ಜನ್ಮ. ಹುಟ್ಟು ಎಷ್ಟು ಸಹಜವೋ, ಮೃತ್ಯು ಕೂಡ ಅಷ್ಟೇ ನಿಶ್ಚಿತ. ಹುಟ್ಟು-ಸಾವುಗಳ ಮಧ್ಯದ ಬದುಕನ್ನು ಸಾರ್ಥಕಪಡಿಸಿಕೊಳ್ಳ ಬೇಕಾದುದು ಅವರವರ ಜವಾಬ್ದಾರಿ. ಕಾಯ ಕಣ್ಮರೆಯಾದರೂ ಮಾಡಿದ ಕಾರ್ಯಗಳು ಯಾವಾಗಲೂ ಶಾಶ್ವತವಾಗಿ ಉಳಿಯುತ್ತವೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಬುಧವಾರ ತೆಗ್ಗಿನಮಠ ಸಂಸ್ಥಾನದ ಲಿಂ.ಶ್ರೀ ಚಂದ್ರಶೇಖರ ಶಿವಾಚಾರ್ಯ ಸ್ವಾಮಿಗಳವರ 11ನೇ ವರ್ಷದ ಪುಣ್ಯ ಸ್ಮರಣೋತ್ಸವ ಹಾಗೂ ತೆಗ್ಗಿನಮಠ ಸಂಸ್ಥಾನದ ಇಂದಿನ ಪಟ್ಟಾಧ್ಯಕ್ಷರಾದ ವರಸದ್ಯೋಜಾತ ಶಿವಾಚಾರ್ಯ ಸ್ವಾಮಿಗಳವರ ಪಟ್ಟಾಧಿಕಾರದ ದಶಮಾನೋತ್ಸವ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.



ದೇಹವಿದು ದೇವನಿರುವ ದೇಗುಲ. ಸತ್ಯ ಮತ್ತು ಶಾಂತಿಗಳಂಥಹ ದೈವೀ ಗುಣಗಳ ಹಣ್ಣು-ಹಂಪಲಗಳನ್ನು ಬೆಳೆಯಬೇಕು. ಅಸುರಿ ಗುಣಗಳ ಕಸ-ಕಡ್ಡಿ ಕಿತ್ತು ಹಾಕಿ ಮುಳ್ಳು-ಕಲ್ಲುಗಳನ್ನು ಸ್ವಚ್ಛಗೊಳಿಸಿ ಶಿವಜ್ಞಾನದ ಬೀಜ ಬಿತ್ತುವಾತನೇ ನಿಜವಾದ ಗುರು. ಬಾಳಿನ ಉನ್ನತಿ-ಅವನತಿಗೆ ಮನುಷ್ಯನ ಮನಸ್ಸು ಮೂಲ. ಸುಖ ಬಯಸುವುದು ಮನುಷ್ಯನ ಸಹಜ ಗುಣ. ಆದರೆ ಸುಖದ ಪ್ರಾಪ್ತಿಗಾಗಿ ಆಚರಿಸಬೇಕಾದ ಧರ್ಮಾಚರಣೆಯನ್ನು ಮನುಷ್ಯ ಮಾಡುವುದಿಲ್ಲ. ಲಿಂ.ಶ್ರೀ ಚಂದ್ರಶೇಖರ ಶಿವಾಚಾರ್ಯ ಸ್ವಾಮಿಗಳವರ ಜೀವನದ ಸಿದ್ಧಿ ಸಾಧನೆಗಳು ಸಾಧಕರ ಬಾಳಿಗೆ ಬೆಳಕು ತೋರಿ ಮುನ್ನಡೆಸುತ್ತವೆ ಎಂದರು.

ನೇತೃತ್ವ ವಹಿಸಿದ ತೆಗ್ಗಿನಮಠ ಸಂಸ್ಥಾನದ ವರಸದ್ಯೋಜಾತ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಹೊನ್ನು, ಹೆಣ್ಣು, ಮಣ್ಣಿಗಾಗಿ ಮಡಿದವರು ಕೋಟಿ ಕೋಟಿ ಜನ. ಆದರೆ ಭಗವಂತನಿಗಾಗಿ ಸತ್ತವರನ್ನು ಕಾಣಲಾಗದು. ಮಹಾನುಭಾವರಿಗೆ ಸತ್ಯವೇ ಸಂಪತ್ತು. ಧರ್ಮವೇ ಅವರ ಉಸಿರು. ಭೌತಿಕ ಸಂಪತ್ತಿಗಾಗಿ ಹೋರಾಡಿದವರು ಕಾಲಗರ್ಭದಲ್ಲಿ ಬೆರೆತು ಹೋದರು. ಜಗದ ಜನತೆಗೆ ಬೆಳಕು ತೋರುವ ಜೀವನ ಸಾಗಿಸಿದ ಮಹಾತ್ಮರ, ಋಷಿಮುನಿಗಳ ಮತ್ತು ಸಂತ ಮಹಂತರ ಮಾತುಗಳನ್ನು ಯಾರೂ ಮರೆಯುವಂತಿಲ್ಲ. ಲಿಂ.ಚಂದ್ರಮೌಳೀಶ್ವರ ಶ್ರೀಗಳವರ ಸಾಧನೆ ಬೋಧನೆ ವೀರಶೈವ ಸಮಾಜಕ್ಕೆ ಮತ್ತು ಧರ್ಮ ಪೀಠಗಳಿಗೆ ಅಮೂಲ್ಯ ಕೊಡುಗೆ ಕೊಟ್ಟಿದ್ದನ್ನು ಮರೆಯಲಾಗದೆಂದರು.

ಸಮಾರಂಭ ಉದ್ಘಾಟಿಸಿದ ಹರಪನಹಳ್ಳಿ ಶಾಸಕರಾದ ಎಂ.ಪಿ. ಲತಾ ಮಲ್ಲಿಕಾರ್ಜುನ ಮಾತನಾಡಿ, ಸುಖಮಯ ಜೀವನಕ್ಕೆ ಧರ್ಮಾಚರಣೆ ಬಹಳ ಮುಖ್ಯ. ಅಂತರಂಗದ ಬೆಳಕಿಗಿಂತ ಬಹಿರಂಗದ ಬೆಳಕು ಹೆಚ್ಚೆಂದು ಮನುಷ್ಯ ತಿಳಿದಿರುತ್ತಾನೆ. ಗುರಿಯಿಲ್ಲದ ಮತ್ತು ಗುರು ಇಲ್ಲದ ಜೀವನ ಬೆಳೆಯಲಾರದು. ಲಿಂ.ಚಂದ್ರಮೌಳೀಶ್ವರ ಶ್ರೀಗಳವರು ಶ್ರಮಪಟ್ಟು ಶಿಕ್ಷಣ ಕೇಂದ್ರ ಹುಟ್ಟು ಹಾಕಿ ಬೆಳೆಸಿದ್ದು ಅವರಲ್ಲಿರುವ ಸಾಮಾಜಿಕ ಕಾಳಜಿಯನ್ನು ಕಾಣಬಹುದಾಗಿದೆ. ಹಿರಿಯರ ಆದರ್ಶ ದಾರಿಯಲ್ಲಿ ವರಸದ್ಯೋಜಾತ ಶ್ರೀಗಳವರು ಸದಾ ಶ್ರಮಿಸುತ್ತಿರುವುದು ಸಂತೋಷವನ್ನುಂಟುಮಾಡುತ್ತದೆ ಎಂದರು.

ಎಮ್ಮಿಗನೂರು ವಾಮದೇವ ಮಹಾಂತ ಶಿವಾಚಾರ್ಯ ಸ್ವಾಮಿಗಳು ವೀರಶೈವ ಧರ್ಮ ಮತ್ತು ಗುರು ಪರಂಪರೆ ಕುರಿತು ಉಪದೇಶಾಮೃತವನ್ನಿತ್ತರು. ಹುಕ್ಕೇರಿ ಹಿರೇಮಠದ ಚಂದ್ರಶೇಖರ ಶಿವಾಚಾರ್ಯ ಸ್ವಾಮಿಗಳು ಅಧ್ಯಕ್ಷತೆ ವಹಿಸಿದ್ದರು.

ಡಾ. ಟಿ.ಎಂ. ಚಂದ್ರಶೇಖರಯ್ಯ, ಆನಂದಸ್ವಾಮಿ ಗಡ್ಡದ್ದೇವರಮಠ, ಟಿ.ಎಂ. ಶಿವದೇವಸ್ವಾಮಿ, ಉತ್ತಮಚಂದ ಜೈನ್ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದರು. ಪಾರ್ವತಿ ಶಾಬಾದಿಮಠ, ಪಿ. ಮಂಜುನಾಥ ವಿಶೇಷ ಆಹ್ವಾನಿತರಾಗಿದ್ದರು. ಹೆಚ್.ಎಂ. ಕೊಟ್ರಯ್ಯ, ಟಿ.ಎಂ. ವಿಶ್ವನಾಥ, ಪಿ.ಬಿ. ಗೌಡ್ರು, ಟಿ.ಎಂ. ಪ್ರತೀಕ, ಕೆ. ಹನುಮಂತಪ್ಪ ಮೊದಲಾದವರಿಗೆ ಗುರುರಕ್ಷೆ ಜರುಗಿತು.

ಶ್ರೀ ಜಗದ್ಗುರು ರೇಣುಕಾಚಾರ್ಯ ಗುರುಕುಲ ಸಾಧಕರಿಂದ ವೇದಘೋಷ, ಹರಪನಹಳ್ಳಿ ಮಡಿವಾಳಸ್ವಾಮಿ ಇವರಿಂದ ಸ್ವಾಗತ ಜರುಗಿತು. ಸಿ.ಎಂ. ಕೊಟ್ರಯ್ಯ ನಿರೂಪಿಸಿದರು.

---

## ದೆಹಲಿ ಮಹಾನಗರ ಪಾಲಿಕೆ ಉಪಚುನಾವಣೆ: 7 ವಾರ್ಡ್‌ಗಳಲ್ಲಿ ಬಿಜೆಪಿ, ಮೂರರಲ್ಲಿ ಆಪ್‌ಗೆ ಗೆಲುವು

■ **ವಿಜಯಸಾಕ್ಷಿ ಸುದ್ದಿ, ನವದೆಹಲಿ**

ದೆಹಲಿ ಮಹಾನಗರ ಪಾಲಿಕೆ (ಎಂಸಿಡಿ) ಉಪಚುನಾವಣೆಯ ಮತಗಳ ಎಣಿಕೆ ಬುಧವಾರ (ಡಿಸೆಂಬರ್ 1) ನಡೆಯಿತು. ಭಾರತೀಯ ಜನತಾ ಪಕ್ಷ (ಬಿಜೆಪಿ) 12 ವಾರ್ಡ್‌ಗಳಲ್ಲಿ ಏಳು ವಾರ್ಡ್‌ಗಳನ್ನು ಗೆಲ್ಲುವ ಮೂಲಕ ಭರ್ಜರಿ ಜಯ ಸಾಧಿಸಿದೆ.

ಆಮ್ ಆದ್ಮಿ ಪಕ್ಷ (ಎಎಪಿ) ಮೂರು ವಾರ್ಡ್‌ಗಳನ್ನು ಗೆದ್ದಿದೆ. ಕಾಂಗ್ರೆಸ್ ಮತ್ತು ಆಲ್ ಇಂಡಿಯಾ ಫಾರ್ವರ್ಡ್ ಬ್ಲಾಕ್ (ಎಐಎಫ್‌ಬಿ) ತಲಾ ಒಂದು ವಾರ್ಡ್ ಅನ್ನು ಗೆದ್ದಿವೆ. 250 ಎಂಸಿಡಿಯಲ್ಲಿ ಬಿಜೆಪಿ ಈಗ 122 ಸ್ಥಾನಗಳನ್ನು ಹೊಂದಿದೆ.

---

# ಪೌರ ನೌಕರರ ಸಂಘದಿಂದ ಜಿಲ್ಲಾಧಿಕಾರಿಗೆ ಮನವಿ

■ **ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯದಲ್ಲಿರುವ ಎಲ್ಲಾ ಮಹಾನಗರ ಪಾಲಿಕೆ, ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರ ಬೇಡಿಕೆಗಳನ್ನು ಈಡೇರಿಸದೇ ಇರುವುದರಿಂದ ಡಿ. 5ರಿಂದ ಅನಿರ್ದಿಷ್ಟಾವಧಿ ಮುಷ್ಕರ ಹಮ್ಮಿಕೊಳ್ಳುವದಾಗಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರರಿಗೆ ಜಿಲ್ಲಾ ಪೌರ ನೌಕರರ ಸಂಘದ ಪದಾಧಿಕಾರಿಗಳು ಮನವಿ ಸಲ್ಲಿಸಿದರು.

ಪೌರ ನೌಕರರ ಜಿಲ್ಲಾಧ್ಯಕ್ಷ ರಮೇಶ ಹಲಗಿಯವರ ಮಾತನಾಡಿ, ಗದಗ ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರ ಬೇಡಿಕೆಗಳನ್ನು ಈಡೇರಿಸುವ ಸಲುವಾಗಿ ನ. 9ರಂದು ಕೊಪ್ಪಳದಲ್ಲಿ ಪದಾಧಿಕಾರಿಗಳ ರಾಜ್ಯ ಪರಿಷತ್ ಸಭೆಯನ್ನು ಹಮ್ಮಿಕೊಳ್ಳಲಾಗಿದ್ದು, ನಾವು ಹಂತ ಹಂತವಾಗಿ ಹೋರಾಟ ಮಾಡುವುದು ಅನಿವಾರ್ಯವಾಗಿದೆ ಎಂದರು.

ಅದರಂತೆ ಮೇ. 30ರಂದು ಪೌರಾಡಳಿತ ಹಾಗೂ ಹಜ್ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡಾವಳಿಯಂತೆ ನೌಕರರ ಪ್ರಮುಖ ಬೇಡಿಕೆಗಳನ್ನು ಈಡೇರಿಸದೇ ಹೋದಲ್ಲಿ ರಾಜ್ಯ ಪರಿಷತ್ ಸಭೆಯ ತಿರ್ಮಾನದಂತೆ ಡಿ. 5ರಿಂದ ಗದಗ ಜಿಲ್ಲಾದ್ಯಂತ ಎಲ್ಲ ನಗರ ಸ್ಥಳೀಯ ಸಂಸ್ಥೆಗಳ ಕಚೇರಿ ಕೆಲಸ, ಎಲ್ಲಾ ವಿಧದ ನೈರ್ಮಲ್ಯ ಕಾರ್ಯವನ್ನು ಒಳಗೊಂಡಂತೆ ಮತ್ತು ನೀರು ಸರಬರಾಜು ಸೇರಿ ಎಲ್ಲಾ ಕಾರ್ಯಗಳನ್ನು ಸ್ಥಗಿತಗೊಳಿಸಿ ನಮ್ಮ ನಮ್ಮ ಕಾರ್ಯಾಲಯದ ಮುಂದೆ ಸರ್ಕಾರದ ಮಲತಾಯಿ ಧೋರಣೆಯನ್ನು ಖಂಡಿಸಿ ಅನಿರ್ದಿಷ್ಟ ಕಾಲ ಮುಷ್ಕರವನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದರು.




ಈ ಸಂದರ್ಭದಲ್ಲಿ ಕೆಂಚಪ್ಪ ಪೂಜಾರ್, ಶಾಖಾಧ್ಯಕ್ಷ ಚಂದ್ರು ಹಾದಿಮನಿ, ಹೇಮೇಶ್ ಹೆಟ್ಟಿ, ನಾಗೇಶ್ ಬಳ್ಳಾರಿ, ಅರವಿಂದ್ ಕುರ್ತಕೋಟಿ, ರಮೇಶ ಬಾರಕೇರ, ರವಿ ಕುಂಬಾರ, ಪರಶುರಾಮ್ ಸಣ್ಣತಮ್ಮಣ್ಣವರ, ಮುದಕಪ್ಪ ಬಚೆನಳ್ಳಿ, ಮಹಾಂತಪ್ಪ ದಿವಟರ್, ದಾವಲಪ್ಪ, ನದಾಫ್ ಸೇರಿದಂತೆ ಪೌರ ನೌಕರರು ಉಪಸ್ಥಿತರಿದ್ದರು.

---

**ಶಿರಹಟ್ಟಿ ತಾಲೂಕಿನಲ್ಲಿ ಗೋವುಗಳ ಮಾರಣಹೋಮ; ಶ್ರೀರಾಮ ಸೇನೆ ಆರೋಪ**

# ಪೊಲೀಸ್ ಇಲಾಖೆಯ ಜಾಣ ಕುರುಡು ನೀತಿ



■ **ವಿಜಯಸಾಕ್ಷಿ ಸುದ್ದಿ, ಗದಗ**

ಶಿರಹಟ್ಟಿ ತಾಲೂಕಿನಲ್ಲಿ ಪ್ರತಿನಿತ್ಯ ನೂರಾರು ಗೋವುಗಳು ಆಕ್ರಮವಾಗಿ ಕಗ್ಗೊಲೆಯಾಗಿ ಜೀವ ಕಳೆದುಕೊಳ್ಳುತ್ತಿದ್ದರೂ ಸಹ ತಾಲೂಕಾಡಳಿತ, ಪೊಲೀಸ್ ಇಲಾಖೆ ಜಾಣ ಕುರುಡು ನೀತಿ ಅನುಸರಿಸುತ್ತಿದೆಯೆಂದು ಶ್ರೀರಾಮ ಸೇನೆ ರಾಜ್ಯ ಶಾರೀರಿಕ ಪ್ರಮುಖ ಮಹೇಶ ರೋಖಡೆ ಆರೋಪಿಸಿದರು.

ಶಿರಹಟ್ಟಿ ತಹಸೀಲ್ದಾರ ಕಚೇರಿಯೆದುರು ಶಿರಹಟ್ಟಿ ಪಿಎಸ್‌ಐ ಈರಣ್ಣ ರಿತ್ತಿ ದೌರ್ಜನ್ಯ ವಿರೋಧಿಸಿ ಕಳೆದ ಹತ್ತು ದಿನಗಳಿಂದ ನಡೆಯುತ್ತಿರುವ ಧರಣಿ ಸತ್ಯಾಗ್ರಹದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಶಿರಹಟ್ಟಿಯಲ್ಲಿ ಯಾವದೇ ಕಸಾಯಿಖಾನೆಗಳಿಲ್ಲ. ಪ್ರತಿನಿತ್ಯ ವಿವಿಧ ಮಸೀದಿಗಳಲ್ಲಿ ಗೋವುಗಳನ್ನು ಆಕ್ರಮವಾಗಿ ಕಗ್ಗೊಲೆ ಮಾಡಿ ಸೇವಿಸಲಾಗುತ್ತಿದೆ. ಈ ಸಂಗತಿ ಶಿರಹಟ್ಟಿ ತಾಲೂಕಾಡಳಿತ, ಪೊಲೀಸ್ ಅಧಿಕಾರಿಗಳಿಗೆ ತಿಳಿದಿದ್ದರೂ ಸಹ ಇದುವರೆಗೆ ಒಂದೇ ಒಂದು ಪ್ರಕರಣ ದಾಖಲಿಸಲಾಗಿಲ್ಲವೆಂದು ಆರೋಪಿಸಿದರು.

ಇಂತಹ ಒಂದು ನಿರ್ದಿಷ್ಟ ವರ್ಗದ ಜನತೆಗೆ ಶಿರಹಟ್ಟಿ ಪಿಎಸ್‌ಐ ಈರಣ್ಣ ರಿತ್ತಿ ಪರೋಕ್ಷವಾಗಿ, ಅಪರೋಕ್ಷವಾಗಿ ಸಹಾಯ-ಸಹಕಾರ ನೀಡುತ್ತಿದ್ದಾರೆ. ಇದರಿಂದಾಗಿ ಮಸೀದಿಗಳಲ್ಲಿ ಗೋವುಗಳ ವಧೆ ಯಥಾವತ್ತಾಗಿ ನಡೆದಿದೆ. ಸರಕಾರಿ ಅಧಿಕಾರಿಗಳು ರಾಜಕೀಯ ವ್ಯಕ್ತಿಗಳಂತೆ ಒಂದು ನಿರ್ದಿಷ್ಟ ವರ್ಗವನ್ನು ಓಲೈಸುತ್ತಿರುವದು ವಿಚಿತ್ರವಾಗಿದೆ. ಯಾರ ಅಣತಿಯಂತೆ ಪಿಎಸ್‌ಐ ಈರಣ್ಣ ರಿತ್ತಿ ಗೋವುಗಳ ಹತ್ಯೆ ನಡೆಯುತ್ತಿದ್ದರೂ ಮೌನವಾಗಿದ್ದಾರೆಂಬಸಂಗತಿಯ ಬಗ್ಗೆ ಜಿಲ್ಲಾ ಪೊಲೀಸ್ ವರೀಷ್ಠಾಧಿಕಾರಿಗಳು ಸಮಗ್ರ ತನಿಖೆ ನಡೆಸಬೇಕೆಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಸೋಮಪ್ಪ ಲಮಾಣಿ, ಗಂಗವ್ವ ಲಮಾಣಿ, ಬಸವರಾಜ ಕುರ್ತಕೋಟಿ, ಸತೀಶ ಕುಂಬಾರ, ಮಹೇಶ ಹೆಬಸೂರ, ಶಿವಯೋಗಿ ಹಿರೇಮಠ, ಕಿರಣ ಹಿರೇಮಠ, ವೆಂಕಟೇಶ ದೊಡ್ಡಮನಿ, ಅಭಿಲಾಷ ಗುಜಮಾಗಡಿ, ಲಕ್ಷ್ಮಣ ಗೌಡ, ರಮೇಶ ವಾಲ್ಮೀಕಿ, ಈರಪ್ಪ ವಾಲ್ಮೀಕಿ, ಪ್ರಮೋದ ರಜಪೂತ, ಕುಮಾರ ಮಿಟ್ಟಿಮಠ, ಹುಲಿಗೆಪ್ಪ ವಾಲ್ಮೀಕಿ, ಈರಣ್ಣ ಗಾಣಿಗೇರ, ಪರಶುರಾಮ ಆಡಿನ, ಮಂಜುನಾಥ ಸಜ್ಜನ, ಆನಂದ ಅರಿಕೇರಿ, ಬಸವರಾಜ ವೆಂಕಟಾಪೂರ, ಮೈಲಾರಿ ದಂಡಿನ, ಪರಶುರಾಮ ಡೊಂಕನಹಳ್ಳಿ, ರಮೇಶ ಲಮಾಣಿ ಮುಂತಾದವರಿದ್ದರು.

---



ನೇಕಾರರ ಪತ್ತಿನ ಸಹಕಾರ ಸಂಘದ ಕಾರ್ಯಾಲಯದಲ್ಲಿ 2026ನೇ ಸಾಲಿನ ಹೊಸ ದಿನದರ್ಶಿಕೆಯನ್ನು ಸಂಘದ ಅಧ್ಯಕ್ಷ ಮಲ್ಲಿಕಾರ್ಜುನ ಬೆಲ್ಲದ ಬಿಡುಗಡೆ ಮಾಡಿದರು. ಈ ಸಂದರ್ಭದಲ್ಲಿ ಸಂಘದ ಉಪಾಧ್ಯಕ್ಷ ವಿಜಯಕುಮಾರ ಕಬಾಡಿ, ನಿರ್ದೇಶಕರಾದ ಅಮರೇಶ ಚ್ಯಾಗಿ, ಅನಿಲ್ ಗಡ್ಡಿ, ಸುಭಾಷ ಗಂಜಿ, ನಾಮದೇವ ಸೂರೆ, ವೀರಭದ್ರಪ್ಪ ಗಂಜಿ, ಮೈಲಾರಪ್ಪ ಅರಣಿ, ವಿಷ್ಣು ಪಾಸ್ತೆ, ಮುಖ್ಯ ಕಾರ್ಯನಿರ್ವಾಹಕ ಪ್ರಭು ನೀಲಗುಂದ, ಸಿಬ್ಬಂದಿ ವೀರೇಶ ಕುಂಬಾರ ಉಪಸ್ಥಿತರಿದ್ದರು.

---

# ಸಾಧನೆಗೆ ವಿಕಲತೆ ಅಡ್ಡಿ ಆಗಬಾರದು

■ **ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಬಿ.ಡಿ. ತಟ್ಟಿ ಮೆಮೋರಿಯಲ್ ಚಾರಿಟೇಬಲ್ ಟ್ರಸ್ಟ್‌ನ ಕಿವುಡ ಮಕ್ಕಳ ವಸತಿ ಶಾಲೆಯಲ್ಲಿ ಮಂಗಳವಾರ ವಿಶ್ವ ವಿಕಲಚೇತರ ದಿನಾಚರಣೆ ಆಚರಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸಂಸ್ಥೆಯ ಗೌರವ ಕಾರ್ಯದರ್ಶಿ ಸೋಮನಾಥ ಮಹಾಜನಶೆಟ್ಟರ ಮಾತನಾಡುತ್ತ, ವಿಶೇಷ ಚೇತನ ಮಕ್ಕಳೂ ಸಹ ಸಾಮಾನ್ಯರಂತೆ ಸ್ವಾವಲಂಬಿಗಳಾಗಿ ಸಮಾಜದ ಮುಖ್ಯವಾಹಿನಿಗೆ ಬರಬೇಕು ಎಂದರು.

ಸರಕಾರಿ ಪ್ರೌಢ ಶಾಲೆ ಶಿಕ್ಷಕಿ ಎ.ಎಂ. ಕುಂಬಾರ ಮಾತನಾಡಿ, ಸಾಧನೆಗೆ ವಿಕಲತೆ ಅಡ್ಡಿ ಆಗಬಾರದು. ಸಾಧಿಸುವ ಛಲ ಇದ್ದರೆ ಏನೆಲ್ಲ ಸಾಧಿಸಬಹುದು. ಇದಕ್ಕೆ ಅನೇಕ ನಿದರ್ಶನಗಳಿದ್ದು, ಆ ನಿಟ್ಟಿನಲ್ಲಿ ಮುನ್ನಡಯಬೇಕು ಎಂದರು.




ಆಡಳಿತಾಧಿಕಾರಿ ಬಿ.ಬಿ. ಹುಬ್ಬಳ್ಳಿ ಮಾತನಾಡಿದರು. ಸಂಸ್ಥೆಯ ಧರ್ಮದರ್ಶಿ ಮಹಾಂತೇಶ ತಟ್ಟಿ, ಮುಖ್ಯೋಪಾಧ್ಯಾಯೆ ಜಯಶ್ರೀ ಶೆಟ್ಟರ, ಪ್ರತಿಮಾ ಮಹಾಜನಶೆಟ್ಟರ, ಲಕ್ಷ್ಮೀ ರೋಣದ, ಅಶ್ವಿನಿ ಪಾಟೀಲ, ವಿಜಯಲಕ್ಷ್ಮೀ ಮುಧೋಳ, ಜಿ.ಪಿ. ಪವಾರ, ಗೀತಾ ಸಂಕದಾಳ ಮುಂತಾದವರಿದ್ದರು.

---

# ರೈತರ ಬೇಡಿಕೆಗಳನ್ನು ಈಡೇರಿಸಬೇಕು



■ **ವಿಜಯಸಾಕ್ಷಿ ಸುದ್ದಿ, ಗದಗ**

ರೈತರ ವಿವಿಧ ಬೇಡಿಕೆಗಳಈಡೇರಿಕೆಗೆ ಒತ್ತಾಯಿಸಿ ಡಿ. 8ರಿಂದ ಬೆಳಗಾವಿಯಲ್ಲಿ ಆರಂಭವಾಗಲಿರುವ ಚಳಿಗಾಲದ ಅಧಿವೇಶನ ಸಂದರ್ಭದಲ್ಲಿ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಜಿಲ್ಲಾಧ್ಯಕ್ಷ ನಟರಾಜ ಸವಡಿ ಹೇಳಿದರು.

ಬುಧವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯ ಸರಕಾರ ಮೂರು ಕೃಷಿ ಕಾಯ್ದೆಗಳನ್ನು ಹಿಂಪಡೆಯಬೇಕು. ರೈತರ ಸಂಪೂರ್ಣ ಸಾಲ ಮನ್ನಾ ಮಾಡಬೇಕು. ರೈತರ ಪಂಪ್‌ಸೆಟ್‌ಗಳಿಗೆ ಈ ಹಿಂದಿನಂತೆ ಉಚಿತವಾಗಿ ವಿದ್ಯುತ್ ಒದಗಿಸುವುದು ಸೇರಿದಂತೆ ಅನೇಕ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಲಾಗುವುದು ಎಂದರು.

ಜಲಜೀವನ ಮಿಷನ್ ಅಡಿಯಲ್ಲಿ ಪ್ರತಿ ಹಳ್ಳಿಗೂ ಸಮರ್ಪಕವಾಗಿ ನೀರು ಪೂರೈಕೆ ಮಾಡಬೇಕು. ವಿದ್ಯುನ್ಮಾನ ದತ್ತಾಂಶ ಭಂಡಾರ ಮಾಡಿ ಅದರಲ್ಲಿ ರೈತರಿಗೆ ಬೇಕಾದ ಎಲ್ಲ ಪ್ರಮಾಣಪತ್ರಗಳನ್ನು ಸಂಗ್ರಹಿಸಿ ಇಡಬೇಕು. ಪ್ರಮಾಣಪತ್ರಗಳನ್ನು ನೀಡಲು ಬೇಕಾಗುವ ದಾಖಲೆಯನ್ನು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಅಥವಾ ಸಿಬ್ಬಂದಿ ರೈತರ ಮನೆ ಬಾಗಿಲಿಗೆ ಬರುವ ಕೆಲಸವನ್ನು ಮಾಡಬೇಕು ಎಂದು ಒತ್ತಾಯಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಮಲ್ಲಿಕಾರ್ಜುನ ಹಿರೇಮಠ, ನಾಗವೇಣಿ ಕುಡಪಲಿ, ಮೋಹನ್ ಇಬ್ರಾಹಿಮಪುರ, ರೇಖಾ ಜಡಿ, ರುದ್ರಗೌಡ ಪಾಟೀಲ, ಉಮೇಶ್ ಮಾರ್ತಪ್ಪನವರ, ಮಹಾರುದ್ರಯ್ಯ ಲಕ್ಕುಂಡಿ, ಸೋಮಶೇಖರ್ ಕಡಗದ, ಮಹಮ್ಮದ್ ಅಲಿ ಬಾವಾಲೆ, ವಿಶ್ವನಾಥ ಹಿರೇಮಠ, ಸೋಮಶೇಖರ್ ಚಳ್ಳಿಮಠ ಮುಂತಾದವರಿದ್ದರು.

---

**ಅಖಿಲ ಭಾರತ ವೀರಶೈವ ಶಿವಾಚಾರ್ಯ ಸಂಸ್ಥೆಯ ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು**

# ಸತ್ಕಾರ್ಯ ಸಾಧನೆಗೆ ಸಂಘಟನೆ ಮುಖ್ಯ

■ **ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ**

ಸಂವೇದನಾಶೀಲ ಜೀವನಕ್ಕೆ ವೀರಶೈವ ಧರ್ಮ ಕೊಟ್ಟ ಕೊಡುಗೆ ಅಪಾರ. ಬದುಕಿನ ಉನ್ನತಿಗೆ ಸಂಸ್ಕಾರ ಮತ್ತು ಸಂಸ್ಕೃತಿ ಅಡಿಪಾಯ. ಸಮೃದ್ಧ, ಸದೃಢ ನಾಡು ಕಟ್ಟುವುದೇ ಧರ್ಮ ಪೀಠಗಳ ಗುರಿಯಾಗಿದೆ. ಸತ್ಕಾರ್ಯಗಳ ಸಾಧನೆಗೆ ಸಾಮರಸ್ಯ ಮತ್ತು ಸಂಘಟನೆ ಮುಖ್ಯವೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಮಂಗಳವಾರ ತೆಗ್ಗಿನಮಠ ಸಂಸ್ಥಾನದ ಆವರಣದಲ್ಲಿ ಜರುಗಿದ ಅಖಿಲ ಭಾರತ ವೀರಶೈವ ಶಿವಾಚಾರ್ಯ ಸಂಸ್ಥೆಯ ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಸಾಮಾಜಿಕ ಸಂಪ್ರದಾಯಗಳು ಕೆಲವೊಮ್ಮೆ ಬದಲಾಗಬಹುದು. ಆದರೆ ನೈತಿಕ ನಿಯಮಗಳು ಯಾವಾಗಲೂ ಶಾಶ್ವತವಾಗಿರುತ್ತವೆ. ಧರ್ಮ, ಸಂಸ್ಕೃತಿ, ಪರಂಪರೆ ರಕ್ಷಿಸಿ ಸುಂದರ ಬಂಧುರ ಸಮಾಜವನ್ನು ಕಟ್ಟಿ ಬೆಳೆಸುವುದರಲ್ಲಿ ಮಠಗಳ ಪಾತ್ರ ಬಹಳಷ್ಟು ಮಹತ್ವದ್ದಾಗಿದೆ.



ತಾಯಿ ಬೇರು ನಕ್ಕರೆ ಮೂಲ ಮರ ಚಿಗುರುತ್ತದೆ. ತಾಯಿ ಬೇರು ಅತ್ತರೆ ಆ ಮರ ಬರಡಾಗುತ್ತದೆ. ಸಮಾಜದಲ್ಲಿ ಉಂಟಾಗುತ್ತಿರುವ ಕೆಡುಕುಗಳನ್ನು ಮೆಟ್ಟಿ ನಿಂತು ಒಳಿತಿನತ್ತ ಹೆಜ್ಜೆ ಹಾಕುವುದೇ ಗುರು ಪೀಠಗಳ ಗುರಿಯಾಗಿದೆ ಎಂದರು.

ಸಂಸ್ಥೆಯ ನಿಕಟಪೂರ್ವ ಗೌರವಾಧ್ಯಕ್ಷರಾಗಿದ್ದ ಎಡೆಯೂರು ರೇಣುಕ ಶಿವಾಚಾರ್ಯ ಸ್ವಾಮಿಗಳು ಮತ್ತು ಅಧ್ಯಕ್ಷರಾಗಿದ್ದ ಮುಕ್ತಿಮಂದಿರ ಕ್ಷೇತ್ರದ ರೇಣುಕ ಶಿವಾಚಾರ್ಯ ಸ್ವಾಮಿಗಳಿಗೆ ಸಂಸ್ಥೆಯಿಂದ ಗೌರವ ಸಮರ್ಪಣೆ ಸಲ್ಲಿಸಲಾಯಿತು. ಸಂಸ್ಥೆಯ ಉಪಾಧ್ಯಕ್ಷರಾದ ಹುಕ್ಕೇರಿ ಹಿರೇಮಠದ ಚಂದ್ರಶೇಖರ ಶಿವಾಚಾರ್ಯ ಸ್ವಾಮಿಗಳು, ಸಂಸ್ಥೆಯ ವಕ್ತಾರರಾದ ಎಮ್ಮಿಗನೂರು ವಾಮದೇವ ಮಹಂತ ಶಿವಾಚಾರ್ಯ ಸ್ವಾಮಿಗಳು, ಬೆಂಗಳೂರು ವಿಭೂತಿಪುರ ಮಠದ ಡಾ. ಮಹಾಂತಲಿಂಗ ಶಿವಾಚಾರ್ಯ ಸ್ವಾಮಿಗಳು ಸದಾಶಯ ನುಡಿಗಳನ್ನಾಡಿದರು. ಸಂಸ್ಥೆಯ ಉಪಾಧ್ಯಕ್ಷರಾದ ನಾಗಣಸೂರು ಶ್ರೀಕಂಠ ಶಿವಾಚಾರ್ಯ ಸ್ವಾಮಿಗಳು ಮತ್ತು ಬಿಚಗುಂದ ಸೋಮಶೇಖರ ಶಿವಾಚಾರ್ಯ ಸ್ವಾಮಿಗಳು ಸಮ್ಮುಖ ವಹಿಸಿದ್ದರು.

ಪ್ರಾಸ್ತಾವಿಕ ನುಡಿಗಳನ್ನಾಡಿದ ಸಂಸ್ಥೆಯ ಕಾರ್ಯದರ್ಶಿ ಮೇಲಣಗವಿ ಡಾ. ಮಲಯ ಶಾಂತಮುನಿ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಸಮಾಜದಲ್ಲಿ ಅತಿ ಶತ್ರುಗಳನ್ನು ನಿಯಂತ್ರಿಸಬಹುದು. ಆದರೆ ಮತಿ ಶತ್ರುಗಳನ್ನು ನಿಯಂತ್ರಿಸುವುದು ತುಂಬಾ ಕಷ್ಟ. ಉನ್ನತ ಗುರಿ ಮತ್ತು ಧ್ಯೇಯ ವ್ಯಕ್ತಿತ್ವ ವಿಕಾಸಕ್ಕೆ ದಾರಿದೀಪ. ವೀರಶೈವ ಧರ್ಮದ ಸಂವಿಧಾನದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯರು ರೂಪಿಸಿದ ದಶಧರ್ಮ ಸೂತ್ರಗಳು ಸಕಲರ ಬಾಳಿಗೆ ಬೆಳಕು ತೋರುತ್ತವೆ ಎಂದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ ಅಖಿಲ ಭಾರತ ವೀರಶೈವ ಶಿವಾಚಾರ್ಯ ಸಂಸ್ಥೆಯ ನೂತನ ಅಧ್ಯಕ್ಷರಾದ ಸಿಂದಗಿ ಸಾರಂಗಮಠದ ಡಾ. ಪ್ರಭುಸಾರಂಗದೇವ ಶಿವಾಚಾರ್ಯ ಸ್ವಾಮಿಗಳು ಮಾತನಾಡಿದರು. ಇದೇ ಸಂದರ್ಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು ಸಂಸ್ಥೆಯ ಲಾಂಛನ ಬಿಡುಗಡೆಗೊಳಿಸಿದರು. ಡಾ. ಟಿ.ಎಂ. ಚಂದ್ರಶೇಖರಯ್ಯ, ಶಂಭುಲಿಂಗಯ್ಯ ಹಿರೇಮಠ, ಎಂ. ರಾಜಶೇಖರ ಸಮಾರಂಭದಲ್ಲಿ ಉಪಸ್ಥಿತರಿದ್ದರು.

ಬಾಳೆಹೊನ್ನೂರು ಶ್ರೀ ಜಗದ್ಗುರು ರೇಣುಕಾಚಾರ್ಯ ಗುರುಕುಲ ಸಾಧಕರಿಂದ ವೇದಘೋಷ, ಸಂಸ್ಥೆಯ ಸಹ ಕಾರ್ಯದರ್ಶಿ ಬಿಳಕಿ ಹಿರೇಮಠದ ರಾಚೋಟೇಶ್ವರ ಶಿವಾಚಾರ್ಯ ಸ್ವಾಮಿಗಳಿಂದ ಪ್ರಾರ್ಥನೆ, ಸಂಸ್ಥೆಯ ಉಪಾಧ್ಯಕ್ಷರಾದ ಶ್ರೀನಿವಾಸ ಸರಡಗಿಯ ಡಾ. ರೇವಣಸಿದ್ಧ ಶಿವಾಚಾರ್ಯ ಸ್ವಾಮಿಗಳಿಂದ ಸ್ವಾಗತ ಜರುಗಿತು. ಸಂಸ್ಥೆಯ ಸಹ ಕಾರ್ಯದರ್ಶಿ ದೇವಾಪುರ ಹಿರೇಮಠದ ಶಿವಮೂರ್ತಿ ಶಿವಾಚಾರ್ಯ ಸ್ವಾಮಿಗಳು ನಿರೂಪಿಸಿದರು.

# ನಮ್ಮ ಸರ್ಕಾರ ರೈತರ ಪರವಾಗಿದೆ

**■ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯದಲ್ಲಿ ಈ ವರ್ಷ ಅತ್ಯಧಿಕ ಪ್ರಮಾಣದಲ್ಲಿ ಮೆಕ್ಕೆಜೋಳ ಉತ್ಪಾದನೆಯಾಗಿದೆ. ಆದರೆ ಬೆಲೆ ಕುಸಿತದಿಂದ ಕಂಗಾಲಾಗಿರುವ ರೈತರು ತೀವ್ರ ಸಂಕಷ್ಟದಲ್ಲಿದ್ದಾರೆ. ಹಾಗೂ ರೈತರಿಗೆ ಆರ್ಥಿಕ ಸಬಲತೆ ನೀಡುವ ಉದ್ದೇಶದಿಂದ ರಾಜ್ಯ ಸರ್ಕಾವು ಬೆಂಬಲ ಬೆಲೆಯಡಿ ಮೆಕ್ಕೆಜೋಳ ಖರೀದಿ ಪ್ರಾರಂಭ ಮಾಡಿರುವದು ಶ್ಲಾಘನೀಯ ಕಾರ್ಯ ಎಂದು ಕೆಪಿಸಿಸಿ ರಾಜ್ಯ ಪ್ರಧಾನ ಕಾರ್ಯದರ್ಶಿ ಸುಜಾತಾ ಎನ್. ದೊಡ್ಡಮನಿ ಅಭಿಪ್ರಾಯಪಟ್ಟಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಒಂದು ಕ್ವಿಂಟಲ್ ಮೆಕ್ಕೆಜೋಳಕ್ಕೆ 2400 ರೂ ಕನಿಷ್ಠ ಬೆಂಬಲ ಬೆಲೆ ನಿಗದಿಪಡಿಸಲಾಗಿದೆ. ಜಿಲ್ಲೆಯ ಲಕ್ಷ್ಮೇಶ್ವರ ಪಟ್ಟಣ ಸೇರಿದಂತೆ ವಿವಿಧ ಭಾಗದಲ್ಲಿ ರೈತರು ಮೆಕ್ಕೆಜೋಳ ಖರೀದಿ ಕೇಂದ್ರ ಪ್ರಾರಂಭ ಮಾಡುವಂತೆ ಸರ್ಕಾರದ ಮೇಲೆ ಒತ್ತಡ ಹಾಕಿದ್ದರು. ನಮ್ಮ ಕಾಂಗ್ರೆಸ್ ಪಕ್ಷ ರೈತರ ಪರವಾಗಿದೆ. ಮಾರುಕಟ್ಟೆಯಲ್ಲಿ ದರ ಕುಸಿತವಾಗಿರುವ ಕಾರಣ, ಈ ಖರೀದಿ ಕೇಂದ್ರಗಳು ರೈತರಿಗೆ ದೊಡ್ಡ



ಮಟ್ಟದ ಆರ್ಥಿಕ ಸಹಾಯವನ್ನು ಒದಗಿಸುತ್ತವೆ.

ರೈತ ಸಮುದಾಯದ ಹಿತಾಸಕ್ತಿ ಕಾಪಾಡುವ ಉದ್ದೇಶದಿಂದ ಬೆಂಬಲ ಬೆಲೆಯಡಿ ಮೆಕ್ಕೆಜೋಳ ಖರೀದಿ ಕೇಂದ್ರ ಸ್ಥಾಪನೆಗೆ ತಕ್ಷಣ ಅಗತ್ಯ ಕ್ರಮ ತಗೆದುಕೊಂಡ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ, ಜಿಲ್ಲಾ ಉಸ್ತುವಾರಿ ಸಚಿವ ಎಚ್. ಕೆ. ಪಾಟೀಲ, ಆಹಾರ ಸಚಿವ ಕೆ.ಎಚ್. ಮುನಿಯಪ್ಪ, ಕೃಷಿ ಸಚಿವ ಎನ್.ಚಲುವರಾಯಸ್ವಾಮಿ, ತೋಟಗಾರಿಕೆ ಸಚಿವ ಶಿವಾನಂದ ಪಾಟೀಲ ಸೇರಿದಂತೆ ಸಂಪುಟದ ಸಚಿವರಿಗೆ ಸುಜಾತಾ ದೊಡ್ಡಮನಿ. ಅಭಿನಂದನೆಗಳನ್ನು ಸಲ್ಲಿಸಿದ್ದಾರೆ.

## 'ವಿಶ್ವ ವಿಕಲಚೇತನರ ದಿನಾಚರಣೆ' ಕಾರ್ಯಕ್ರಮದಲ್ಲಿ ಸಭಾಪತಿ ಬಸವರಾಜ ಹೊರಟ್ಟಿ ಅಭಿಮತ

# ವಿಕಲಚೇತನ ಮಕ್ಕಳು ದೇವರ ಸಮಾನರು

**■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ**

ವಿಕಲಚೇತನ ಮಕ್ಕಳು ಎಲ್ಲಾ ಕ್ಷೇತ್ರದಲ್ಲೂ ಸಾಧನೆ ಮಾಡಿದ್ದಾರೆ. ವಿಕಲಚೇತನ ಮಕ್ಕಳು ದೇವರ ಸಮಾನರು ಎಂದು ಕರ್ನಾಟಕ ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಅಭಿಪ್ರಾಯಪಟ್ಟರು.

ಬುಧವಾರ ಇಂದಿರಾ ಗಾಜಿನ ಮನೆಯಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಶಾಲಾ ಶಿಕ್ಷಣ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಧಾರವಾಡ, ವಿಕಲಚೇತನರ ಶ್ರೇಯೋಭಿವೃದ್ಧಿಗಾಗಿ ಶ್ರಮಿಸುತ್ತಿರುವ ಜಿಲ್ಲೆಯ ಸ್ವಯಂ ಸೇವಾ ಶಿಕ್ಷಣ ಸಂಸ್ಥೆಗಳು ಮತ್ತು ವಿಕಲಚೇತನರ ಸಂಘ ಸಂಸ್ಥೆಗಳು, ಮಜೇಥೀಯಾ ಫೌಂಡೇಶನ್-ಹುಬ್ಬಳ್ಳಿ, ಅದಮ್ಯ




ಚೇತನ ಫೌಂಡೇಶನ್-ಹುಬ್ಬಳ್ಳಿ, "ಸಕ್ಷಮ" ಕರ್ನಾಟಕ-ಉತ್ತರ ಪ್ರಾಂತ, ಹುಬ್ಬಳ್ಳಿ, ಆಶಾಕಿರಣ-ಕಿಮ್ಸ್, ಧಾರವಾಡ ಜಿಲ್ಲೆಯ ವಿ.ಆರ್.ಡಬ್ಲ್ಯೂ, ಯು.ಆರ್. ಡಬ್ಲ್ಯೂ, ಎಮ್.ಆರ್.ಡಬ್ಲ್ಯೂ ಇವರುಗಳ ಸಂಯುಕ್ತ ಆಶ್ರಯದಲ್ಲಿ ವಿಶ್ವ ವಿಕಲಚೇತನರ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಶಾಸಕ ಮಹೇಶ ಟೆಂಗಿನಕಾಯಿ ಅಧ್ಯಕ್ಷತೆ ವಹಿಸಿ ಮಾತನಾಡಿ, ಶಾಸಕರ ಪ್ರದೇಶಾಭಿವೃದ್ಧಿ ನಿಧಿಯಡಿ ತ್ರಿಚಕ್ರ ವಾಹನ ವಿತರಿಸುವ ಕೆಲಸಗಳನ್ನು ನಿರಂತರವಾಗಿ ಮಾಡಿಕೊಂಡು ಬರಲಾಗುತ್ತಿದೆ. ವಿಕಲಚೇತನರಿಗಾಗಿ ಕೇಂದ್ರ ಸರ್ಕಾರ ವಿಶೇಷ ಯೋಜನೆಗಳನ್ನು ಜಾರಿಗೆ ತಂದಿದೆ. ಸುಮಾರು ರೂ. 2 ಕೋಟಿ ವೆಚ್ಚದಲ್ಲಿ ಕಿಮ್ಸ್‌ಗೆ ವಿಶೇಷಚೇತನರಿಗಾಗಿ ಸಾಧನ ಸಲಕರಣೆಗಳನ್ನು ಒದಗಿಸಲಾಗಿದೆ. ಅಲ್ಲದೇ ರೂ.23 ಲಕ್ಷ ವೆಚ್ಚದಲ್ಲಿ ವಿಕಲಚೇತನರಿಗೆ ವಿಶೇಷ ಸಾಮಗ್ರಿಗಳನ್ನು ಇಂದು ವಿತರಿಸಲಾಗುತ್ತಿದೆ. ಈ ಹಿಂದೆ ಮೂರುಸಾವಿರ ಮಠದಲ್ಲಿ ವಿಕಲಚೇತನರ ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ಆಯೋಜನೆ ಮಾಡಲಾಗಿತ್ತು. ಒಟ್ಟಿನಲ್ಲಿ ವಿಕಲಚೇತನರಿಗೆ ಅವಕಾಶ ಕಲ್ಪಿಸಿಕೊಡುವ ಕೆಲಸ ಕಾರ್ಯಗಳಾಗಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ವಿಕಲಚೇತನರಿಗೆ ವಾಹನಗಳು ಹಾಗೂ ಸಾಧನ-ಸಲಕರಣೆಗಳನ್ನು ವಿತರಿಸಲಾಯಿತು. ವಿಶೇಷಚೇತನರ ಕ್ಷೇತ್ರದಲ್ಲಿ ಸಾಧನೆಗೈದ ಸಾಧಕರು ಹಾಗೂ ಸ್ವಯಂ ಸೇವಾಸಂಸ್ಥೆಯ ಮುಖ್ಯಸ್ಥರನ್ನು ಸನ್ಮಾನಿಸಿ ಗೌರವಿಸಲಾಯಿತು. ಸಾಂಸ್ಕೃತಿಕ ಹಾಗೂ ಕ್ರೀಡಾ ಚಟುವಟಿಕೆಗಳಲ್ಲಿ ಭಾಗವಹಿಸಿದ ವಿದ್ಯಾರ್ಥಿಗಳಿಗೆ ಬಹುಮಾನ ಮತ್ತು ಪ್ರಮಾಣಪತ್ರ ವಿತರಿಸಲಾಯಿತು.

ಈಗಾಗಲೇ ನಾನು ವೈಯಕ್ತಿಕವಾಗಿ ಸುಮಾರು 156 ತ್ರಿಚಕ್ರ ಸೈಕಲ್‌ಗಳನ್ನು ವಿತರಣೆ ಮಾಡಿದ್ದೇನೆ. ಸರ್ಕಾರ ವಿಕಲಚೇತನ ಮಕ್ಕಳ ಬಗ್ಗೆ ವಿಶೇಷ ಕಾಳಜಿ ವಹಿಸಬೇಕು. ಅವರ ಸಮಸ್ಯೆಗಳನ್ನು ಮುಖ್ಯಮಂತ್ರಿಗಳ ಗಮನಕ್ಕೆ ತರಲಾಗುವುದು. ಅಲ್ಲದೇ ಸಮಸ್ಯೆಗಳ ಪರಿಹಾರಕ್ಕೆ ಕ್ರಮ ಕೈಗೊಳ್ಳಲಾಗುತ್ತದೆ. ಸರ್ಕಾರದ ವಿವಿಧ ಯೋಜನೆಗಳ ಮೂಲಕ ವಿಕಲಚೇತನರ ಅಭಿವೃದ್ಧಿಗೆ ಕ್ರಮ ವಹಿಸಲಾಗುವುದು. ವಿಕಲಚೇತನರ ಕುಂದು-ಕೊರತೆಗಳನ್ನು ಸರ್ಕಾರದ ಮಟ್ಟದಲ್ಲಿ ಇತ್ಯರ್ಥಪಡಿಸಲಾಗುವುದು ಎಂದು ಬಸವರಾಜ ಹೊರಟ್ಟಿ ತಿಳಿಸಿದರು.

ಈ ಸಂದರ್ಭದಲ್ಲಿ ಮಹಾಪೌರರಾದ ಜ್ಯೋತಿ ಪಾಟೀಲ, ಉಪಮಹಾಪೌರ ಸಂತೋಷ ಚವ್ಹಾಣ, ಪಾಲಿಕೆಯ ವಿರೋಧ ಪಕ್ಷದ ನಾಯಕರಾದ ಇಮ್ರಾನ್ ಯಲಿಗಾರ, ಮಾಜಿ ಮಹಾಪೌರರಾದ ವೀಣಾ ಭರದ್ವಾಡ, ಪಾಲಿಕೆ ಸದಸ್ಯರಾದ ರೂಪಾ ಶೆಟ್ಟಿ, ಬೀರಪ್ಪ ಖಂಡೇಕರ, ಪಾಲಿಕೆಯ ಆಯುಕ್ತರಾದ ಡಾ. ರುದ್ರೇಶ ಘಾಳಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ಎಚ್.ಎಚ್. ಕುಕನೂರ, ಮಜೇಥಿಯಾ ಫೌಂಡೇಶನ್ ಅಧ್ಯಕ್ಷ ಜಿತೇಂದ್ರ ಮಜೇಥಿಯಾ, ಸಮಾಜದ ಮುಖಂಡರಾದ ಐ.ಕೆ. ಲಕ್ಕುಂಡಿ, ಗುರು ಲಕ್ಕುಂಡಿ, ಮಧುಕರ ಶೆಟ್ಟಿ, ಮಂಜುನಾಥ, ತಾರಾ ಸೇರಿದಂತೆ ಪಾಲಿಕೆ ಸದಸ್ಯರು, ವಿವಿಧ ಇಲಾಖೆಗಳ ಅಧಿಕಾರಿಗಳು, ಪದಾಧಿಕಾರಿಗಳು, ಶಿಕ್ಷಕರು, ವಿದ್ಯಾರ್ಥಿಗಳು, ಸಾರ್ವಜನಿಕರು ಭಾಗವಹಿಸಿದ್ದರು.

ಅಂಧ ಬಾಲಕರ ಸರ್ಕಾರಿ ಪಾಠಶಾಲೆಯ ವಿದ್ಯಾರ್ಥಿಗಳು ಪ್ರಾರ್ಥಿಸಿದರು. ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಸವಿತಾ ಕಾಳೆ ಸ್ವಾಗತಿಸಿ, ಪ್ರಾಸ್ತಾವಿಕ ನುಡಿಗಳನ್ನಾಡಿದರು. ಶಿಕ್ಷಕ ಅಣ್ಣಪ್ಪ ಕೋಳಿ ವಂದಿಸಿದರು.

# ಮಂಜುನಾಥ ಆರೆಂಟ್ನೂರಗೆ ಪಿಎಚ್.ಡಿ

**■ವಿಜಯಸಾಕ್ಷಿ ಸುದ್ದಿ, ಕೊಪ್ಪಳ**

ನಗರದ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ದೈಹಿಕ ನಿರ್ದೇಶಕ ಮಂಜುನಾಥ ಆರೆಂಟ್ನೂರು ಅವರ ವಾಲಿಬಾಲ್ ಮತ್ತು ಬಾಸ್ಕೆಟ್‌ಬಾಲ್ ಆಟಗಾರರ ಭಾವನಾತ್ಮಕ ಬುದ್ಧಿವಂತಿಕೆ ಮತ್ತು ಪರಸ್ಪರ ಹೊಂದಾಣಿಕೆಗಳ ಮೇಲಿನ ಪರಿಣಾಮ ಕುರಿತ ಮಹಾಪ್ರಬಂಧಕ್ಕೆ ಮಹಾರಾಷ್ಟ್ರದ ಛತ್ರಪತಿ ಸಾಂಭಾಜಿನಗರದ ಡಾ.ಬಾಬಾಸಾಹೇಬ್ ಅಂಬೇಡ್ಕರ್ ಮರಾಠಾವಾಡ ವಿಶ್ವವಿದ್ಯಾಲಯವು ಡಾಕ್ಟರೇಟ್ ಪದವಿ ನೀಡಿದೆ. ಜಲ್ನಾದ ಭಾರತ ದೈಹಿಕ ಶಿಕ್ಷಣ ಕಾಲೇಜಿನ ಪ್ರಾಚಾರ್ಯ ಡಾ.ಭಕ್ತ



ಡಿ.ಆರ್. ಮಾರ್ಗದರ್ಶನದಲ್ಲಿ ಮಂಜುನಾಥ ಅವರು ಮಹಾಪ್ರಬಂಧ ಮಂಡಿಸಿದರು.

# ಸಹಾಯಧನಕ್ಕಾಗಿ ಅರ್ಜಿ ಆಹ್ವಾನ

**■ವಿಜಯಸಾಕ್ಷಿ ಸುದ್ದಿ, ಗದಗ**

2025-26ನೇ ಸಾಲಿನಲ್ಲಿ ಪ್ರಧಾನ ಮಂತ್ರಿ ಮತ್ಸ್ಯ ಸಂಪದ ಯೋಜನೆಯಡಿ ಧರ್ತಿ ಆಭಾ ಜನ ಜಾತಿಯ ಗ್ರಾಮ ಉತ್ಕರ್ಷ ಅಭಿಯಾನ ಕಾರ್ಯಕ್ರಮದಡಿ ಪರಿಶಿಷ್ಟ ಪಂಗಡ ಸಮುದಾಯಕ್ಕೆ ಸೇರಿದ ಗದಗ ಜಿಲ್ಲೆಯ ರೋಣ ತಾಲೂಕಿನ ಅಸೂಟಿ ಗ್ರಾ.ಪಂ ವ್ಯಾಪ್ತಿಯ ಮೇಲ್ಮಠ, ಲಕ್ಷ್ಮೇಶ್ವರ ತಾಲೂಕಿನ ಗೋವನಾಳ ಗ್ರಾ.ಪಂ ವ್ಯಾಪ್ತಿಯ ವಡೆಯರ ಮಲ್ಲಾಪೂರ, ಶಿರಹಟ್ಟಿ ತಾಲೂಕಿನ ಮಾಚೇನಗಳ್ಳಿ ಗ್ರಾ.ಪಂ ವ್ಯಾಪ್ತಿಯ ಭಾವನೂರ ಹಾಗೂ ಮುಂಡರಗಿ ತಾಲೂಕಿನ ಹಾರೋಗೇರಿ ಗ್ರಾ.ಪಂ ವ್ಯಾಪ್ತಿಯ ಕೇಲೂರ ಗ್ರಾಮದ ಮೀನುಗಾರರಿಗೆ ಮಾತ್ರ ಅನ್ವಯಿಸುವಂತೆ ಮೀನು ಮಾರಾಟಕ್ಕಾಗಿ ಐಸ್ ಬಾಕ್ಸ್‌ನೊಂದಿಗೆ ದ್ವಿಚಕ್ರ ವಾಹನ ಖರೀದಿಗೆ ಸಹಾಯಧನ ನೀಡಲು ಗದಗ ಜಿಲ್ಲೆಗೆ ದ್ವಿಚಕ್ರ ವಾಹನ-1 ಗುರಿ ನಿಗದಿಪಡಿಸಿದೆ.

ಅರ್ಜಿಯನ್ನು ಡಿಸೆಂಬರ್ 20ರೊಳಗಾಗಿ ಸಂಬಂಧಿಸಿದ ತಾಲೂಕಿನ ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಛೇರಿಯಲ್ಲಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ರೋಣ ತಾಲೂಕಿನ ಮೀನುಗಾರರು ಮೀನುಗಾರಿಕೆ ಸಹಾಯಕ ನಿರ್ದೇಶಕರು, ಗದಗ ಮೊ-8095792530, ಲಕ್ಷ್ಮೇಶ್ವರ, ಶಿರಹಟ್ಟಿ ಹಾಗೂ ಮುಂಡರಗಿ ತಾಲೂಕಿನ ಮೀನುಗಾರರು ಮೀನುಗಾರಿಕೆ ಸಹಾಯಕ ನಿರ್ದೇಶಕರು, ಮುಂಡರಗಿ ಮೊ.ನಂ: 8095792530 ಸಂಪರ್ಕಿಸಬಹುದಾಗಿದೆ.

## ಅತ್ಯಾಚಾರ ಪ್ರಕರಣ : ಪ್ರಜ್ವಲ್ ರೇವಣ್ಣ ಜೀವಾವಧಿ ಶಿಕ್ಷೆ ಅಮಾನತಿಗೆ ಹೈಕೋರ್ಟ್ ನಕಾರ

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಹಾಸನ ಜಿಲ್ಲೆ ಹೊಳೆನರಸೀಪುರ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ದಾಖಲಾಗಿರುವ ಮೊದಲ ಅತ್ಯಾಚಾರ ಪ್ರಕರಣದಲ್ಲಿ ತನಗೆ ವಿಧಿಸಲಾದ ಜೀವಾವಧಿ ಶಿಕ್ಷೆಯನ್ನು ಅಮಾನತುಗೊಳಿಸುವಂತೆ ಕೋರಿ ಅಪರಾಧಿ, ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಸಲ್ಲಿಸಿದ್ದ ಅರ್ಜಿಯನ್ನು ಹೈಕೋರ್ಟ್ ಬುಧವಾರ (ಡಿ.3) ತಿರಸ್ಕರಿಸಿದೆ. ಅಪರಾಧಿಯ ವಿರುದ್ಧ ಇರುವ ಎಲ್ಲಾ ದಾಖಲೆಗಳು, ಪ್ರಕರಣದ ಗಂಭೀರತೆ ಮತ್ತು ಆರೋಪಿಯ ವಿರುದ್ಧ ಇನ್ನೂ ಪ್ರಕರಣಗಳು ಬಾಕಿ



ಇರುವುದನ್ನು ಗಮನದಲ್ಲಿಟ್ಟುಕೊಂಡು, ಅಪರಾಧಿಯನ್ನು ಜಾಮೀನಿನ ಮೇಲೆ ಬಿಡುಗಡೆ ಮಾಡಿದರೆ ಅದು ಇತರ ಪ್ರಕರಣಗಳ ಮೇಲೆ ಪರಿಣಾಮ ಬೀರಬಹುದು ಎಂದು ಪರಿಗಣಿಸಿ, ಈ ಪ್ರಕರಣದಲ್ಲಿ ಶಿಕ್ಷೆಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಿ ಜಾಮೀನು ನೀಡುವುದು ಯೋಗ್ಯವಲ್ಲ ಎಂದು ನ್ಯಾಯಮೂರ್ತಿಗಳಾದ ಕೆ ಎಸ್. ಮುದಗಲ್ ಮತ್ತು ಟಿ ವೆಂಕಟೇಶ್ ನಾಯಕ್ ಅವರ ವಿಭಾಗೀಯ ಪೀಠವು ಮುಕ್ತ ನ್ಯಾಯಾಲಯದಲ್ಲಿ ಅಭಿಪ್ರಾಯಪಟ್ಟಿದೆ ಎಂದು ಲೈವ್ ಲಾ ವರದಿ ಮಾಡಿದೆ.


ಅತ್ಯಾಚಾರ ಪ್ರಕರಣದಲ್ಲಿ ಜೀವನ ಪರ್ಯಂತ ಜೈಲು ಶಿಕ್ಷೆ ವಿಧಿಸಿರುವ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದ ಆದೇಶ ಪ್ರಶ್ನಿಸಿ ಮೇಲ್ಮನವಿ ಸಲ್ಲಿಸಿದ್ದ ಪ್ರಜ್ವಲ್ ರೇವಣ್ಣ, ಶಿಕ್ಷೆಯನ್ನು ಅಮಾನತಿನಲ್ಲಿರಿಸಿ ಜಾಮೀನು ನೀಡುವಂತೆ ಕೋರಿ ಮಧ್ಯಂತರ ಅರ್ಜಿ ಸಲ್ಲಿಸಿದ್ದರು.

# ಅತಿಥಿ ಉಪನ್ಯಾಸಕರಿಗೆ ನ್ಯಾಯ ಒದಗಿಸಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಕಾಲೇಜು ಶಿಕ್ಷಣ ಇಲಾಖೆ ನಡೆಸುತ್ತಿರುವ ಕೌನ್ಸೆಲಿಂಗ್ ನಿಲ್ಲಿಸಬೇಕು, ಸೇವೆಯಲ್ಲಿ ಇರುವವರನ್ನು ಮುಂದುವರೆಸಬೇಕು ಇತ್ಯಾದಿ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ರಾಜ್ಯ ಸರ್ಕಾರಿ ಪ್ರಥಮದರ್ಜೆ ಕಾಲೇಜುಗಳ ಅತಿಥಿ ಉಪನ್ಯಾಸಕರ ಸಂಘದಿಂದ ನಗರದಲ್ಲಿ ನಡೆಯುತ್ತಿರುವ ಅತಿಥಿ ಉಪನ್ಯಾಸಕರ ಧರಣಿ ಸತ್ಯಾಗ್ರಹ ಬುಧವಾರ 10ನೇ ದಿನಕ್ಕೆ ಕಾಲಿಟ್ಟಿದ್ದು, ಗಾನಯೋಗಿ ಪಂಚಾಕ್ಷರಿ ಪುಟ್ಟರಾಜ ಕಲಾ ಬಳಗದಿಂದ ಸಂಗೀತ ಸೇವೆ ಸಲ್ಲಿಸಿ ಬೆಂಬಲ ಸೂಚಿಸಿದರು.

ಈ ಸಂದರ್ಭದಲ್ಲಿ ತಾ.ಪಂ ಮಾಜಿ ಅಧ್ಯಕ್ಷ ತಿಪ್ಪಣ್ಣ ಕೊಂಚಿಗೇರ ಮಾತನಾಡಿ, ಸರಕಾರ ಶೀಘ್ರವಾಗಿ ಅತಿಥಿ ಉಪನ್ಯಾಸಕರಿಗೆ ನ್ಯಾಯ ನೀಡಬೇಕು. ಇಂತಹ ಪ್ರಜ್ಞಾವಂತರು




ಬೀದಿಯಲ್ಲಿ ಕುಳಿತು ನ್ಯಾಯ ಕೇಳುವ ಪರಿಸ್ಥಿತಿ ಬಂದೊದಗಿದ್ದು ಖೇದಕರ ಸಂಗತಿ. ಅವರಿಗೆ ನ್ಯಾಯ ನೀಡಿ ಎಂದು ಹೇಳಿದರು.

ಹಿರಿಯ ಪತ್ರಕರ್ತ ಜಗದೀಶ್ ಕುಲಕರ್ಣಿ ಮಾತನಾಡಿ, ವರ್ಷಗಳ ಕಾಲ ಬಹಳ ಕಡಿಮೆ ವೇತನದಲ್ಲಿ ವಿದ್ಯಾರ್ಥಿಗಳ ಭವಿಷ್ಯ ಕಟ್ಟಿದ ತಾವು ಧೈರ್ಯಗುಂದಬಾರದು. ನಿಮ್ಮ ನ್ಯಾಯಯುತವಾದ ಹೋರಾಟಕ್ಕೆ ಬೆಲೆ ಸಿಕ್ಕೇ ಸಿಗುತ್ತದೆ ಎಂದು ಆತ್ಮವಿಶ್ವಾಸ ತುಂಬಿದರು.

ಗದಗ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ರಾಜು ಹೆಬ್ಬಳ್ಳಿ ಮಾತನಾಡಿ, ಈ ಹೋರಾಟದಲ್ಲಿ ನಮಗೂ ಕೂಡಾ ಬೋಧನೆ ಮಾಡಿದ ಗುರುವೃಂದವಿದೆ. ಅತಿಥಿ ಉಪನ್ಯಾಸಕರನ್ನು ಸೇವೆಯಲ್ಲಿ ಮುಂದುವರೆಸುವುದರ ಮೂಲಕ ನ್ಯಾಯ ನೀಡಬೇಕು ಎಂದು ಹೇಳಿದರು.

ರಾಜ್ಯ ಅತಿಥಿ ಉಪನ್ಯಾಸಕರ ಸಂಘದ ರಾಜ್ಯಾಧ್ಯಕ್ಷ ಹನಮಂತಗೌಡ ಆರ್.ಕಲ್ಮನಿ ಮಾತನಾಡಿ, ಮುಖ್ಯಮಂತ್ರಿ ಸಿದ್ಧರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ, ಉನ್ನತ ಶಿಕ್ಷಣ ಸಚಿವರಾದ ಡಾ. ಎಮ್.ಸಿ. ಸುಧಾಕರ ಅವರು ನಮ್ಮ ಬೇಡಿಕೆಯನ್ನು ಈಡೇರಿಸಬೇಕು ಎಂದು ಆಗ್ರಹಿಸಿದರು.

ಹೋರಾಟದಲ್ಲಿ ಗದಗ, ಬಾಗಲಕೋಟೆ, ರಾಣೆಬೆನ್ನೂರ, ಅಂಕೋಲಾ, ಶಿರಸಿ, ಚಿಕ್ಕಮಂಗಳೂರು, ವಿಜಯನಗರ, ಹಾವೇರಿ, ಧಾರವಾಡ, ಕಡೂರ, ಕಲಘಟಗಿ, ಬಳ್ಳಾರಿ, ಹಾವೇರಿ, ತುಮಕೂರ, ಕೊಡಗು, ಬೆಳಗಾವಿ, ಚಿಕ್ಕಮಗಳೂರು, ಉಡಪಿ, ಕಾರ್ಕಳ, ಹೊಸಪೇಟ, ಕೊಪ್ಪಳ ಸೇರಿದಂತೆ ವಿವಿಧ ಜಿಲ್ಲೆಗಳಿಂದ ಆಗಮಿಸಿದ್ದ ನೂರಾರು ಅತಿಥಿ ಉಪನ್ಯಾಸಕರು ಇದ್ದರು.

# ಶಿಕ್ಷಣದ ಪ್ರಗತಿಗೆ ಕಾರಣರಾಗಿ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಶೈಕ್ಷಣಿಕ ತರಬೇತಿಗಳು ಶಿಕ್ಷಕರ ವೃತ್ತಿ ಜೀವನಕ್ಕೆ ಚೈತನ್ಯ ತುಂಬುತ್ತವೆ. ಸರಕಾರ ಹಾಗೂ ಇಲಾಖೆ ಕೊಡಮಾಡುವ ತರಬೇತಿಗಳನ್ನು ಶಿಕ್ಷಕರು ಸಮರ್ಥವಾಗಿ ತರಗತಿಗಳಲ್ಲಿ ಬಳಸಿಕೊಂಡು ಶಿಕ್ಷಣದ ಪ್ರಗತಿಗೆ ಕಾರಣರಾಗಬೇಕು ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಎಚ್.ಎನ್. ನಾಯ್ಕ ಅಭಿಪ್ರಾಯಪಟ್ಟರು.

ಅವರು ಲಕ್ಷ್ಮೇಶ್ವರದ ಲಿಟಲ್ ಹಾರ್ಟ್ಸ್ ಇಂಟರ್ನ್ಯಾಷನಲ್ ಸ್ಕೂಲ್‌ನಲ್ಲಿ ಶಿಕ್ಷಕರಿಗಾಗಿ ಹಮ್ಮಿಕೊಳ್ಳಲಾದ ತರಬೇತಿ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು.

ಅಧ್ಯಕ್ಷತೆ ವಹಿಸಿದ್ದ ಶಾಲೆಯ ಮುಖ್ಯೋಪಾಧ್ಯಾಯ ಗಂಗಾಧರ ಶಿರಹಟ್ಟಿ ಮಾತನಾಡಿ, ಸರ್ಕಾರ ಹಾಗೂ ಖಾಸಗಿ ವಲಯದ ಶಾಲೆಗಳ ಅಂತಿಮ ಗುರಿ ಮಕ್ಕಳ ಸರ್ವತೋಮುಖ ಅಭಿವೃದ್ಧಿಯೇ ಆಗಿದ್ದು, ತರಬೇತಿಗಳು ಅದಕ್ಕೆ ಪೂರಕವಾಗಿವೆ ಎಂದರು.

ಈಶ್ವರ ಮೆಡ್ಲೇರಿ, ಬಸವರಾಜ ಯರಗುಪ್ಪಿ, ಡಿ.ಡಿ. ಲಮಾಣಿ, ಗೀತಾ ಹಳ್ಯಾಳ, ಡಿ.ಎಚ್. ಪಾಟೀಲ, ಪಿ.ವಾಯ್. ಮ್ಯಾಗೇರಿ, ಎಫ್. ಎಸ್. ತಳವಾರ, ರಾಘವೇಂದ್ರ ಜೋಶಿ, ಉಮೇಶ ನೇಕಾರ, ಜ್ಯೋತಿ ಗಾಯಕವಾಡ, ಎನ್.ಎ. ಮುಲ್ಲಾ, ನವೀನ ಅಂಗಡಿ, ಶ್ರೀನಿವಾಸ ಮತ್ತೂರ ನಿರ್ವಹಿಸಿದರು. ತಾಲೂಕಿನ ವಿವಿಧ ಶಾಲೆಗಳ ಶಿಕ್ಷಕರು ತರಬೇತಿಯಲ್ಲಿ ಪಾಲ್ಗೊಂಡಿದ್ದರು.

# ಜಗದ್ಗುರುಗಳು ಅಂಬಿಗರ ಹಿತ ಕಾಯುತ್ತಿಲ್ಲ




**■ವಿಜಯಸಾಕ್ಷಿ ಸುದ್ದಿ, ಗದಗ**

ನಿಜಶರಣ ಅಂಬಿಗರ ಚೌಡಯ್ಯನವರ ಗುರುಪೀಠದ ಜಗದ್ಗುರು ಎಂದು ಕರೆದುಕೊಳ್ಳುತ್ತಿರುವ ಶಾಂತಭೀಷ್ಮಚೌಡಯ್ಯ ಸ್ವಾಮೀಜಿ, ಪೀಠಕ್ಕೆ ಸಂಬಂಧಿಸಿದ ಯಾವುದೇ ಧಾರ್ಮಿಕ ಸಾಮಾಜಿಕ ಕಾರ್ಯಗಳನ್ನು ಮಾಡುತ್ತಿಲ್ಲ ಎಂದು ಅಂಬಿಗರ ಸಮಾಜದ ಮುಖಂಡ ಬಿ.ಜಿ. ಸುಣಗಾರ ಆರೋಪಿಸಿದರು.

ಬುಧವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಶ್ರೀಗಳ ಮುಖ್ಯವಾಗಿ ಗದ್ದುಗೆಗೆ ಹೋಗುವುದಿಲ್ಲ. ಅಂಬಿಗರ ಚೌಡಯ್ಯನವರ ವಚನಗಳನ್ನು ಹಳ್ಳಿ ಹಳ್ಳಿಗೂ ತಲುಪಿಸುವ ಕೆಲಸ ಆಗಿಲ್ಲ. ಅಂಬಿಗರ ಸಮುದಾಯಕ್ಕೆ ಬಹುದೊಡ್ಡ ಇತಿಹಾಸ, ಧರ್ಮ ಇದೆ. ಆ ಬಗ್ಗೆ ಅಧ್ಯಯನ ನಡೆಸಿ, ಸಮಾಜಕ್ಕೆ ಮಾರ್ಗದರ್ಶನ ನೀಡುವ ಕೆಲಸ ಮಾಡುತ್ತಿಲ್ಲ. ಇಂಥ ಶ್ರೀಗಳಿಂದ ಸಮಾಜ ಪ್ರಗತಿ ಕಾಣುವುದು ಹೇಗೆ ಎಂದು ಪ್ರಶ್ನಿಸಿದರು.

ಶ್ರೀ ನಿಜಶರಣ ಅಂಬಿಗರ ಚೌಡಯ್ಯನವರ ಗುರುಪೀಠದ ಸಂಸ್ಥಾಪಕ ಅಧ್ಯಕ್ಷನಾಗಿ ನಾನು ಸಂಘಟನೆ ಮಾಡಿದ್ದೇನೆ. ಸಹಕಾರಿ ತತ್ವದಡಿ ಟ್ರಸ್ಟ್ ನೋಂದಣಿ ಆಗಿತ್ತು. ಆದರೆ ಶ್ರೀಗಳು, ಬೈಲಾ ತಿದ್ದುಪಡಿ ಮಾಡಿ, ಶ್ರೀಮಠವನ್ನು ತಮ್ಮ ಸ್ವಂತ ಆಸ್ತಿಯನ್ನಾಗಿ ಮಾಡಿಕೊಂಡಿದ್ದಾರೆ. ಗುರುಪೀಠದ ಸಂದರ್ಭದಲ್ಲಿ ಸದಸ್ಯತ್ವವೂ ಇಲ್ಲದ ವ್ಯಕ್ತಿಯೊಬ್ಬನನ್ನು ಸಂಸ್ಥಾಪಕ ಎನ್ನುವ ರೀತಿ ಬಿಂಬಿಸಿದ್ದಾರೆ. ಇಂಥವರಿಂದ ಸಮಾಜ ಎಚ್ಚರಿಕೆಯಿಂದ ಇರಬೇಕು ಎಂದು ತಿಳಿಸಿದರು.

ಬ್ರಹ್ಮಶ್ರೀ ರಾಜು ಗುರುಸ್ವಾಮೀಜಿ ಮಾತನಾಡಿ, ಅಂಬಿಗರ ಸಮಾಜ ಬಹುದೊಡ್ಡ ಸಮುದಾಯ. ಬೇರೆ ಬೇರೆ ಹೆಸರಿನಿಂದ ಗುರುತಿಸಲ್ಪಡುವ ಅಂಬಿಗರ ಸಮುದಾಯಕ್ಕೆ ಸೇರಿದ 50ಕ್ಕೂ ಹೆಚ್ಚು ಮಠಾಧೀಶರಿದ್ದಾರೆ. ಆದರೆ ಶಾಂತಭೀಷ್ಮಚೌಡಯ್ಯ ಸ್ವಾಮೀಜಿಗಳು, ತಾವು ಒಬ್ಬರೇ ಅಂಬಿಗರ ಸಮಾಜದ ಜಗದ್ಗುರು ಎಂದು ಸುಳ್ಳು ಹೇಳಿಕೆಗಳನ್ನು ನೀಡುತ್ತಿದ್ದಾರೆ ಎಂದು ಆರೋಪಿಸಿದರು. ಸುದ್ದಿಗೋಷ್ಠಿಯಲ್ಲಿ ಅಂಬಿಗರ ಸಮುದಾಯದ ಮುಖಂಡರಾದ ರಾಮು ಕೌದಿ, ಮಲ್ಲೇಶ ಬಾರಕೇರ, ಬಾಳಪ್ಪ ಬಾರಕೇರ ಇತರರು ಇದ್ದರು.

# ಖರೀದಿ ಪ್ರಮಾಣವನ್ನು ಹೆಚ್ಚಿಸಲು ಆಗ್ರಹ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಸರಕಾರ ತಡವಾಗಿಯಾದರೂ ಗೋವಿನಜೋಳದ ಬೆಂಬಲ ಬೆಲೆ ಕೇಂದ್ರ ಪ್ರಾರಂಭಿಸಿರುವುದು ಸ್ವಾಗತಾರ್ಹವಾಗಿದ್ದು, ಪ್ರತಿ ರೈತರಿಗೆ ನಿಗದಿ ಮಾಡಿರುವ 20 ಕ್ವಿಂಟಲ್ ಪ್ರಮಾಣ ಬದಲಾಗಿ 100 ಕ್ವಿಂಟಲ್‌ಗೆ ಹೆಚ್ಚಿಸಬೇಕು ಎಂದು ಬಿಜೆಪಿ ರೈತ ಮೋರ್ಚಾ ಗದಗ ಜಿಲ್ಲಾಧ್ಯಕ್ಷ ಬಸವರಾಜ ಇಟಗಿ ಆಗ್ರಹಿಸಿದರು.

ಅವರು ಪಟ್ಟಣದ ಪತ್ರಿಕಾ ಕಾರ್ಯಾಲಯದಲ್ಲಿ ಬುಧವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.

ಬೆಂಬಲ ಬೆಲೆ ಖರೀದಿ ಕೇಂದ್ರ ಪ್ರಾರಂಭಕ್ಕೆ ಕಾರಣರಾದ ರೈತ ಹೋರಾಟಗಾರರಿಗೆ ಪಕ್ಷದ ವತಿಯಿಂದ ಧನ್ಯವಾದಗಳನ್ನು ಸಲ್ಲಿಸುತ್ತೇವೆ. ಈ ವರ್ಷ ನಮ್ಮ ಭಾಗದಲ್ಲಿ ಬಹುತೇಕ ರೈತರು ಹೆಚ್ಚಿನ ಕ್ಷೇತ್ರದಲ್ಲಿ ಗೋವಿನಜೋಳ ಬೆಳೆದಿದ್ದಾರೆ. ಮುಂಗಾರಿನ ಹೆಸರು, ಉಳ್ಳಾಗಡ್ಡಿ, ಶೇಂಗಾ ಬೆಳೆಗಳೆಲ್ಲ




ಹಾಳಾಗಿ ಈ ಬೆಳೆಯೊಂದೇ ರೈತರಿಗೆ ಆಸರೆಯಾಗಿದೆ. ಹೆಚ್ಚಿನ ಪ್ರಮಾಣದ ಮೆಕ್ಕೆಜೋಳ ಖರೀದಿಸಬೇಕು.

ರೈತರಿಗೆ ಯಾವುದೇ ತೊಂದರೆಯಾಗದಂತೆ ಖರೀದಿ ಪ್ರಕ್ರಿಯೆ ಕೈಗೊಳ್ಳಬೇಕು. ಖರೀದಿ ಪ್ರಕ್ರಿಯೆ ನಂತರ ಡಿಬಿಟಿ ಮೂಲಕ ಅವರ ಹಣ ಖಾತೆಗಳಿಗೆ ಜಮಾ ಮಾಡಬೇಕು. ಬ್ಯಾಂಕುಗಳು ಜಮೆಯಾದ ಹಣವನ್ನು ಯಾವುದೇ ಕಾರಣಕ್ಕೂ ರೈತರ ಸಾಲದ ಖಾತೆಗಳಿಗೆ ಜಮೆ ಮಾಡಿಕೊಳ್ಳದಂತೆ ಬ್ಯಾಂಕಿನವರಿಗೆ ನಿರ್ದೇಶನ ನೀಡಬೇಕು. ಖರೀದಿ ಕೇಂದ್ರದಲ್ಲಿ ಹೆಸರು ನೋಂದಾಯಿಸಿದ ರೈತರಿಗೆ ಅವರ ಮಹಸೀಲು ತೆಗೆದುಕೊಂಡು ಬರಲು ನಿಗದಿತ ದಿನವನ್ನು ಮೊದಲೇ ಹೇಳಿದರೆ ಒಂದೇ ದಿನಕ್ಕೆ ಹೆಚ್ಚು ರೈತರು ಸೇರಿ ಗದ್ದಲವಾಗುವುದು ತಪ್ಪುತ್ತದೆ. ವೇಬ್ರಿಜ್ ಮೂಲಕ ತೂಕ ಮಾಡಿಕೊಳ್ಳಲು ಅವಕಾಶ ಕಲ್ಪಿಸಬೇಕೆಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಟಿಎಪಿಸಿಎಂಎಸ್ ಅಧ್ಯಕ್ಷ ಸೋಮೇಶ ಉಪನಾಳ, ರೈತ ಮುಖಂಡ ಬಸವರಾಜ ಪಲ್ಲೇದ, ರೈತ ಮೋರ್ಚಾ ಜಿಲ್ಲಾ ಕಾರ್ಯದರ್ಶಿ ಚನ್ನವೀರಪ್ಪ ಹೂಗಾರ, ಅಶೋಕ ಸೂರಣಗಿ, ನಿಂಗಪ್ಪ ಬನ್ನಿ, ಅನಿಲ ಮುಳಗುಂದ, ಗಂಗಾಧರ ಮೆಣಸಿನಕಾಯಿ, ಪ್ರವೀಣ ಬೋಮಲೆ, ಸಂತೋಷ ಜಾವೂರ, ಮಂಜುನಾಥ ಗಜಾಕೋಶ, ಬಸವರಾಜ ಕಲ್ಲೂರ, ಜಾಹೀರ್ ಮೋಮಿನ್ ಹಲವರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka